ವಿಜಯಪುರ | ಸಂಪುಟ 04 | ಸಂಚಿಕೆ 228 | ಪುಟ 04 | ₹ 3.00

https://udayarashminews.com

udayarashmi 90088 88340

ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com


RNI NO: KARKAN/2023/86203

ಬುಧವಾರ, ನವೆಂಬರ್ 04, 2026



"ಇಡೀ ದೇಶದಲ್ಲಿ ಅರಾಜಕತೆ ಸೃಷ್ಟಿಸಲು ಕಾಂಗ್ರೆಸ್ ಹೊರಟಿದೆ. ಕಾಂಗ್ರೆಸ್ ಅರಾಜಕತೆ ಸೃಷ್ಟಿ ಮಾಡಿದ್ದೇ ಆದರೆ ಬಿಜೆಪಿ ಕಾರ್ಯಕರ್ತರು ಹಾಗೂ ಮುಖಂಡರುಗಳು, ಕಾಂಗ್ರೆಸ್ ನಾಯಕರನ್ನು ತುಂಡು ತುಂಡಾಗಿ ಕತ್ತರಿಸಿ ಅರಬ್ಬಿ ಸಮುದ್ರಕ್ಕೆ ಎಸೆಯುತ್ತಾರೆ."

■ ಛಲವಾದಿ ನಾರಾಯಣಸ್ವಾಮಿ
ಬಿಜೆಪಿ ನಾಯಕರು



ಸ್ವಯಂ ನಿವೃತ್ತಿ: ಗುರುಶಾಂತ ಕಾಗವಾಡ ರಿಗೆ ಸನ್ಮಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಗ್ರಾಮೀಣ ವಲಯ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದಲ್ಲಿ ಶಿಕ್ಷಣ ಸಂಯೋಜಕರಾಗಿ ಕಾರ್ಯನಿರ್ವಹಿಸುತ್ತಿದ್ದ ಕನ್ನೂರಿನ ಗುರುಶಾಂತ ಕಾಗವಾಡ ಅವರು ಸ್ವಯಂ ನಿವೃತ್ತಿ ಪಡೆದಿದ್ದರಿಂದ ಇಲಾಖೆ ವತಿಯಿಂದ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ನಗರ ವಲಯ ಕ್ಷೇತ್ರ ಶಿಕ್ಷಣಾಧಿಕಾರಿ ಆರ್ ವಿ ಹೊಸೂರ ಮತ್ತು ಸಿಬ್ಬಂದಿ ಗುರುಶಾಂತ ಕಾಗವಾಡ ಅವರನ್ನು ಸನ್ಮಾನಿಸಿ ಅವರ ಕಾರ್ಯದಕ್ಷತೆ ಮತ್ತು ಸೇವಾ ಮನೋಭಾವ ಕುರಿತು ಶ್ಲಾಘಿಸಿದರು.

ಕಚೇರಿಯ ಸಿಬ್ಬಂದಿ ಮತ್ತು ಸ್ನೇಹಿತರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.



ಬಿ.ಎಲ್.ಡಿ.ಇ ಸಂಸ್ಥೆಯ ಎಸ್.ಬಿ ಕಲಾ ಮತ್ತು ಕೆ.ಸಿ.ಪಿ ವಿಜ್ಞಾನ ಮಹಾವಿದ್ಯಾಲಯದಲ್ಲಿ ಕನ್ನಡ ರಾಜ್ಯೋತ್ಸವ ಆಚರಣೆ

ಕನ್ನಡವನ್ನು ತಾಯಿಯಂತೆ ಪ್ರೀತಿಸಬೇಕು :ಡಾ.ಶ್ರೀನಿವಾಸ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಬಿ.ಎಲ್.ಡಿ.ಇ. ಸಂಸ್ಥೆಯ ಎಸ್.ಬಿ. ಕಲಾ ಮತ್ತು ಕೆ.ಸಿ.ಪಿ. ವಿಜ್ಞಾನ ಮಹಾವಿದ್ಯಾಲಯದಲ್ಲಿ ಆಂತರಿಕಗುಣಮಟ್ಟಭರವಸೆ ಕೋಶ (ಐಕ್ಯೂಎಸಿ) ಹಾಗೂ ಕನ್ನಡ ವಿಭಾಗದ ಸಂಂ–ಯುಕ್ತಾಶ್ರಯದಲ್ಲಿ 71ನೇ ಕನ್ನಡ ರಾಜ್ಯೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲಾಯಿತು.

ಕಾಲೇಜಿನ ಪ್ರಾಚಾರ್ಯ ಡಾ.ಶ್ರೀನಿವಾಸ್ ಎ.ಟಿ ಮಾತನಾಡಿ, ಕನ್ನಡ ಎಂಬುದು ಕೇವಲ ಭಾಷೆಯಲ್ಲ, ಅದು ನಮ್ಮ ಬದುಕು, ಸಂಸ್ಕೃತಿ ಮತ್ತು ಅಸ್ಮಿತೆ. ಪ್ರತಿಯೊಬ್ಬರು ಕನ್ನಡವನ್ನು ತಾಯಿಯಂತೆ ಪ್ರೀತಿಸಬೇಕು, ಗೌರವಿಸಬೇಕು ಎಂದು ಹೇಳಿದರು.

ಡಾ.ಉಷಾದೇವಿ ಹಿರೇಮಠ ಮಾತನಾಡಿ, ಕನ್ನಡ ಭಾಷೆ ನಮ್ಮ ಶ್ರೀಮಂತ ಪರಂಪರೆಯ ಪ್ರತೀಕ. ಕರ್ನಾಟಕ ಏಕೀಕರಣಕ್ಕಾಗಿ ತ್ಯಾಗ ಮಾಡಿದ ಮಹನೀಯರನ್ನು ಸ್ಮರಿಸುವ ದಿನವೇ ರಾಜ್ಯೋತ್ಸವ. ನೆಲ, ಜಲ, ಭಾಷೆ, ಸಂಸ್ಕೃತಿಯನ್ನು ಉಳಿಸಿ ಬೆಳೆಸುವುದು ನಮ್ಮೆಲ್ಲರ ಜವಾಬ್ದಾರಿ. ಕನ್ನಡ ನಮ್ಮ ತಾಯಿ, ಉಸಿರು. ಅದನ್ನು ಆರಾಧಿಸೋಣ ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ದೈಹಿಕ ನಿರ್ದೇಶಕ ಪ್ರೊ. ಎಸ್. ಎ. ಪಾಟೀಲ, ಪಿಯುಸಿ ಪ್ರಾಚಾರ್ಯ ಪ್ರೊ. ಸಿ. ಬಿ. ಪಾಟೀಲ, ಕಛೇರಿ ಅಧೀಕ್ಷಕ ಶಶಿಧರ ಹೇರಲಗಿ, ಡಾ. ಅನಿಲ ನಾಯಕ ಸೇರಿದಂತೆ ಎಲ್ಲ ವಿಭಾಗಗಳ ಮುಖ್ಯಸ್ಥರು, ಪ್ರಾಧ್ಯಾಪಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು

ಧೂಳಖೇಡ ಗ್ರಾಮದಲ್ಲಿ ಗ್ರಾಮ ಒನ್ ಚೈಸಿಗೆ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಗ್ರಾಮ ಒನ್ ಯೋಜನೆಯಡಿ ಚಡಚಣ ತಾಲೂಕಿನ ಧೂಳಖೇಡ ಗ್ರಾಮದಲ್ಲಿ ಗ್ರಾಮ ಒನ್‌ಂಚೈಸಿಗೆ ಆಸಕ್ತರಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಸರ್ಕಾರದ ಸೇವೆಗಳನ್ನು ಮನೆ ಬಾಗಿಲಿಗೆ ತಲುಪಿಸುವುದಾಗಿದೆ.ಈ ಯೋಜನೆಯಡಿ 750ಕ್ಕೂ ಹೆಚ್ಚು ನಾಗರೀಕ ಸೇವೆಗಳನ್ನು ಒದಗಿಸಲಾಗುತ್ತಿದೆ. ಆಸಕ್ತ ಅಭ್ಯರ್ಥಿಗಳು ನ. 15ರವರೆಗೆ ಸೇವಾ ಸಿಂಧು ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಅಭ್ಯರ್ಥಿಗಳು https://sevaone.karnataka.gov.in/services/loginWindow.do ಲಿಂಕ್ ಮೂಲಕ ಪೋರ್ಟಲ್ ಪ್ರವೇಶಿಸಿ, ಸಿಟಿಜನ್ ಲಾಗಿನ್‌ನಲ್ಲಿ ನೋಂದಣಿ ಮಾಡಿಕೊಳ್ಳಬೇಕು.

ನಂತರ ಲಾಗಿನ್ ಆಗಿ ಸರ್ಚ್ ಬಾಕ್ಸ್‌ನಲ್ಲಿ ಗ್ರಾಮ ಒನ್ ಂಚೈಸಿ ಎಂದು ನಮೂದಿಸಿ, ಸಂಬಂಧಿಸಿದ ಆಯ್ಕೆಯನ್ನು ಆರಿಸಿಕೊಂಡು ಅರ್ಜಿ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾಡಳಿತದ ಪ್ರಕಟಣೆ ತಿಳಿಸಿದೆ.

ಕೋಲಾರದಲ್ಲಿ 'ಪ್ರಜಾಪ್ರಭುತ್ವ ಉಳಿಸಿ, ಅರಾಜಕತೆ ಅಳಿಸಿ' ಎಂಬ ಘೋಷಣೆಯೊಂದಿಗೆ ಬಿಜೆಪಿ ಪಾದಯಾತ್ರೆ | ಬಿಜೆಪಿ ಪ್ರತಿಭಟನೆಯಲ್ಲಿ ಬಿ.ವೈ.ವಿಜಯೇಂದ್ರ ವಾಗ್ದಾಳಿ

ದೇಶಾದ್ಯಂತ ಅರಾಜಕತೆ ಸೃಷ್ಟಿಸಲು ರಾಹುಲ್ ಯತ್ನ



ಕೋಲಾರ: ಮತದಾರರ ಪಟ್ಟಿ ಪರಿಷ್ಕರಣೆ (SIR) ಪ್ರಕ್ರಿಯೆಯನ್ನು ಕಾಂಗ್ರೆಸ್ 'ರಾಜಕೀಯಗೊಳಿಸುತ್ತಿದೆ' ಮತ್ತು ಅರಾಜಕತೆಗೆ ಪ್ರಚೋದನೆ ನೀಡಲು ಯುವಜನರನ್ನು ದಾರಿತಪ್ಪಿಸುತ್ತಿದೆ ಎಂದು ಆರೋಪಿಸಿ ಬಿಜೆಪಿ ಮಂಗಳವಾರ ಕೋಲಾರದಲ್ಲಿ 'ಪ್ರಜಾಪ್ರಭುತ್ವ ಉಳಿಸಿ, ಅರಾಜಕತೆ ಅಳಿಸಿ' ಎಂಬ ಘೋಷಣೆಯೊಂದಿಗೆ ಪಾದಯಾತ್ರೆ ನಡೆಸಿತು.

ಡೂಮ್ ಲೈಟ್ ಸರ್ಕಲ್'ನಿಂದ ಆರಂಭವಾದ ಪಾದಯಾತ್ರೆಯಲ್ಲಿ ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಹಾಗೂ ಕರ್ನಾಟಕ ರಾಜ್ಯ ಉಸ್ತುವಾರಿ ಹರೀಶ್ ದ್ವಿವೇದಿ, ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ, ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ, ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕ ಚಲವಾದಿ ನಾರಾಯಣಸ್ವಾಮಿ ಮತ್ತು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಸೇರಿದಂತೆ ಹಲವು ನಾಯಕರು ಪಾಲ್ಗೊಂಡಿದ್ದರು.

ಸಭೆಯನ್ನು ಉದ್ದೇಶಿಸಿ ಮಾತನಾಡಿದ ಬಿ.ವೈ. ವಿಜಯೇಂದ್ರ ಅವರು, ಪ್ರಧಾನಿ ನರೇಂದ್ರ ಮೋದಿ ಅವರ ನಿರಂತರ ಜನಪ್ರಿಯತೆಯನ್ನು ಸಹಿಸಿಕೊಳ್ಳಲು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರಿಗೆ ಸಾಧ್ಯವಾಗುತ್ತಿಲ್ಲ ಮತ್ತು ಅವರು ಕೇಂದ್ರದಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ (NDA) ಸರ್ಕಾರವನ್ನು ಅಸ್ಥಿರಗೊಳಿಸಲು ಪ್ರಯತ್ನಿಸುತ್ತಿದ್ದಾರೆ ಎಂದು ಆರೋಪಿಸಿದರು.

ಸರ್ಕಾರ ಬದಲಾವಣೆ' (regime change) ಕುರಿತು ರಾಹುಲ್ ಗಾಂಧಿ ನೀಡಿದ ಹೇಳಿಕೆಯನ್ನು ಪ್ರಸ್ತಾಪಿಸಿದ ವಿಜಯೇಂದ್ರ, ಪ್ರಜಾಸತ್ತಾತ್ಮಕ ಜನಾದೇಶ ಪಡೆದ ಸರ್ಕಾರವನ್ನು ಕಿತ್ತೊಗೆಯಲು ವಿರೋಧ ಪಕ್ಷಗಳು ಯತ್ನಿಸುತ್ತಿವೆ ಎಂದು ದೂರಿದರು.

ರಾಹುಲ್ ಗಾಂಧಿ ಹತಾಶರಾಗಿದ್ದಾರೆ. ಲೋಕಸಭಾ ಚುನಾವಣೆಗಳಲ್ಲಿ ಪದೇ ಪದೇ ಈ ದೇಶದ ಜನರು, ವಿಶೇಷವಾಗಿ ರಾಜಕೀಯಪ್ರಜ್ಞೆಯುಳ್ಳಮತದಾರರುನರೇಂದ್ರ ಮೋದಿ ಅವರಿಗೆ ಆಶೀರ್ವಾದ ನೀಡಿದ್ದಾರೆ. ಇದನ್ನು ಸಹಿಸಿಕೊಳ್ಳಲು ರಾಹುಲ್ ಗಾಂಧಿ ಅವರಿಗೆ ಸಾಧ್ಯವಾಗುತ್ತಿಲ್ಲ. ಅದಕ್ಕಾಗಿಯೇ ಅವರು ಪ್ರತಿದಿನ ಜಂತರ್ ಮಂತರ್‌ನಲ್ಲಿ ಪ್ರತಿಭಟನೆ ನಡೆಸುತ್ತಿದ್ದಾರೆ. ದೇಶಾದ್ಯಂತ ಅರಾಜಕತೆಯ ವಾತಾವರಣವನ್ನು ಸೃಷ್ಟಿಸಲು ರಾಹುಲ್ ಗಾಂಧಿ ಯತ್ನಿಸುತ್ತಿದ್ದಾರೆ" ಎಂದು ಆರೋಪಿಸಿದರು.

ದೇಶಾದ್ಯಂತ ಈ ಹಿಂದೆಯೂ ಹಲವು ಬಾರಿ ಮತದಾರರ ಪಟ್ಟಿ ಪರಿಷ್ಕರಣೆ ನಡೆದಿದ್ದರೂ, ಕಾಂಗ್ರೆಸ್ ಪಕ್ಷವು ಈಗಿನ ಮತದಾರರ ಪಟ್ಟಿ ಪರಿಷ್ಕರಣೆ (SIR) ಪ್ರಕ್ರಿಯೆಯನ್ನು ವಿರೋಧಿಸುತ್ತಿದೆ ಎಂದು ವಿಜಯೇಂದ್ರ ಹೇಳಿದರು.

ಹಾಲು-ಮೊಸರಿನ ಬೆಲೆ ಏರಿಕೆಗೆ ಖಂಡನೆ

"ಹಾಲು ಮತ್ತು ಮೊಸರಿನ ಬೆಲೆ ಏರಿಸಲಾಗಿದೆ. ಇದರಿಂದ ಜನ ಜೀವನ ನಡೆಸುವುದು ಇರಲಿ, ಉಸಿರಾಡುವುದಕ್ಕೂ ಕಷ್ಟಪಡುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಜನರು ಹಿಂದೆಂದೂ ಕಾಣದಂತಹ ಸಂಕಷ್ಟವನ್ನು ಎದುರಿಸುತ್ತಿದ್ದು, ಬದುಕುಳಿಯುವುದೇ ಕಷ್ಟಕರವಾಗಿದೆ" ಎಂದು ವಿಜಯೇಂದ್ರ ಹೇಳಿದರು.



"ಕಾಂಗ್ರೆಸ್‌ಗೆ ಎಸ್.ಐ.ಆರ್ ಪ್ರಕ್ರಿಯೆಯ ಮೇಲೆ ನಂಬಿಕೆಯಿಲ್ಲ. ಎಲೆಕ್ಟ್ರಾನಿಕ್ ಮತಯಂತ್ರಗಳ (EVM) ಮೇಲೂ ನಂಬಿಕೆಯಿಲ್ಲ. ಕೊನೆಗೆ ಸುಪ್ರೀಂ ಕೋರ್ಟ್ ಮೇಲೂ ಅವರಿಗೆ ನಂಬಿಕೆಯಿಲ್ಲ. ಈ ಪಕ್ಷವು ಸಾಂವಿಧಾನಿಕ ಸಂಸ್ಥೆಗಳ ಬಗ್ಗೆಯೇ ಅನುಮಾನ ವ್ಯಕ್ತಪಡಿಸುತ್ತಿದೆ"

■ ಬಿ.ವೈ.ವಿಜಯೇಂದ್ರ
ಬಿಜೆಪಿ ರಾಜ್ಯಾಧ್ಯಕ್ಷರು

ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ

ರಾಜ್ಯ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ ವಿಜಯೇಂದ್ರ ಅವರು, ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯಗಳು ಸಂಪೂರ್ಣ ಸ್ಥಗಿತಗೊಂಡಿವೆ ಮತ್ತು ಅಗತ್ಯ ವಸ್ತುಗಳ ಬೆಲೆ ದಿನದಿಂದ ದಿನಕ್ಕೆ ಏರಿಕೆಯಾಗುತ್ತಿವೆ ಎಂದು ಆರೋಪಿಸಿದರು.

ಕಾಖಂಡಕಿ ಗ್ರಾಪಂ ವ್ಯಾಪ್ತಿಯ ಕೆರೆ ಪುನಶ್ಚೇತನ ಕಾಮಗಾರಿ ಸ್ಥಳಕ್ಕೆ ಭೇಟಿ | ಕೂಲಿಕಾರ್ಮಿಕರೊಂದಿಗೆ ಸಂವಾದ

ಕೂಲಿಕಾರ್ಮಿಕರಿಗೆ ಸೌಲಭ್ಯ ಕಲ್ಪಿಸಿ :ಸಿಇಒ ಆನಂದ ಪ್ರಕಾಶ ಮೀನಾ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಕೂಲಿಕಾರ್ಮಿಕರಿಗೆ ಸಮರ್ಪಕ ಮೂಲಭೂತ ಸೌಲಭ್ಯ ಕಲ್ಪಿಸುವುದರ ಜೊತೆಗೆ, ವಸತಿ ನಿಲಯದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ, ಪೌಷ್ಟಿಕ ಆಹಾರ ಹಾಗೂ ಉತ್ತಮ ಕಲಿಕಾ ವಾತಾವರಣ ಒದಗಿಸಲು ಆದ್ಯತೆ ನೀಡಬೇಕು ಎಂದು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಆನಂದ ಪ್ರಕಾಶ ಮೀನಾ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಬಬಲೇಶ್ವರ ತಾಲೂಕಿಗೆ ಭೇಟಿ ನೀಡಿದ ಅವರು, ಕಾಖಂಡಕಿ ಗ್ರಾಮದಲ್ಲಿ ಪ್ರಗತಿಯಲ್ಲಿರುವ ಕೆರೆ ಪುನಶ್ಚೇತನ ಕಾಮಗಾರಿ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಕಾಖಂಡಕಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಕೆರೆ ಪುನಶ್ಚೇತನ ಕಾಮಗಾ–ರಿಯ ಸ್ಥಳಕ್ಕೆ ಭೇಟಿ ನೀಡಿದ ಸಿಇಒ ಅವರು, ಕಾಮಗಾರಿಯಪ್ರಗತಿ,ಅಂದಾಜುವೆಚ್ಚಹಾಗೂಅನುಷ್ಠಾನದ ವಿವರಗಳನ್ನು ಅಧಿಕಾರಿಗಳಿಂದ ಪಡೆದುಕೊಂಡರು.

ಸ್ಥಳದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಕೂಲಿಕಾರ್ಮಿಕರೊಂದಿಗೆ ಸಂವಾದ ನಡೆಸಿ, ಕೂಲಿ ಪಾವತಿ, ಕೆಲಸದ ವಾತಾವರಣ ಹಾಗೂ ಅವರಿಗೆ ಲಭ್ಯವಿರುವ ಮೂಲಭೂತ ಸೌಲಭ್ಯಗಳ ಕುರಿತು ಮಾಹಿತಿ ಪಡೆದರು.

ಕೂಲಿಕಾರ್ಮಿಕರಿಗೆ ಸಮರ್ಪಕ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು. ಕೆಲಸ ನಿರ್ವಹಿಸಿದವರಿಗೆ ನಿಗದಿತ ಕೂಲಿ ಹಣ ಸಂದಾಯವಾಗಿರುವುದನ್ನು ಖಚಿತಪಡಿಸಿಕೊಳ್ಳಬೇಕು. ತಾಂತ್ರಿಕ ಕಾರಣಗಳಿಂದ ವೇತನ ಪಾವತಿಯಾಗದ ಪ್ರಕರಣಗಳನ್ನು ಗುರುತಿಸಿ, ಅವುಗಳ ಪಟ್ಟಿಯನ್ನು ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಹೆಚ್ಚಿನ ಕೂಲಿಕಾರ್ಮಿಕರಿಗೆ ಉದ್ಯೋಗಾವಕಾಶ ಕಲ್ಪಿಸುವ ಮೂಲಕ ಕಾಮಗಾರಿಯ ಪ್ರಗತಿಯನ್ನು ವೇಗಗೊಳಿಸುವಂತೆಯೂ ನಿರ್ದೇಶನ ನೀಡಿದರು.

ಬಳಿಕ ಡಾ. ಬಿ.ಆರ್. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಪೂರ್ವಬಾಲಕರವಸತಿನಿಲಯಕ್ಕೆಭೇಟಿನೀಡಿಪರಿಶೀಲಿಸಿದರು.

ಈ ಸಂದರ್ಭದಲ್ಲಿ ಸಹಾಯಕ ನಿರ್ದೇಶಕ ವಿ.ಎಸ್. ಹಿರೇಮಠ, ತಾಂತ್ರಿಕ ಸಿಬ್ಬಂದಿ ಮಹೇಶ ಇಂಗಳೇಶ್ವರ, ಮೋನಿಕಾ ಪೋಳ, ಶಾಂತು ಇಂಡಿ, ಸೂರ್ಯಕಾಂತ ಜತ್ತಿ, ಗಣೇಶ ಕೋಲಕಾರ, ಸರೋಜಿನಿ ಬಿದರಿ, ದಸಗೀರ ಹೊರಗೀನಮನಿ, ಭಾಗ್ಯ ಬಿರಾದಾರ, ಗೀತಾ ಜೋಗುರ ಹಾಗೂ ಲಲಿತಾ ಗೌಡಪ್ಪ ಗೋಳ ಸೇರಿದಂತೆ ಸಂಬಂಧಿಸಿದ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

ಜನಗಣತಿ-2027ರ ಮನೆಗಳ ಪಟ್ಟಿ ಮತ್ತು ಜನಸಂಖ್ಯಾ ಗಣತಿ ನಿಖರವಾಗಿ ನಿರ್ವಹಿಸಲು ಜಿಲ್ಲಾಧಿಕಾರಿ ಡಾ. ಆನಂದ ಕೆ. ಸೂಚನೆ

ಜ.25 ರಿಂದ ಮನೆ ಮನೆಗೆ ಗಣತಿ ಕಾರ್ಯ ಆರಂಭ :ಫೆ.28ರೊಳಗೆ ಪೂರ್ಣ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ:ಮುಂದಿನಹತ್ತುವರ್ಷಗಳಸರ್ಕಾರದ ಯೋಜನೆಗಳು, ಬಜೆಟ್ ಹಂಚಿಕೆ, ಎಸ್‌ಸಿಪಿ ಮತ್ತು ಟಿಎಸ್‌ಪಿ ಅನುದಾನ ಹಾಗೂ ಕ್ಷೇತ್ರಗಳ ಪುನರ್ವಿಂಗಡಣೆ ಸೇರಿದಂತೆ ಹಲವು ಪ್ರಮುಖ ನಿರ್ಧಾರಗಳಿಗೆ ಜನಗಣತಿಯ ಮಾಹಿತಿ ಆಧಾರವಾಗಲಿದೆ. ಆದ್ದ–ರಿಂದ ಭಾರತದ ಜನಗಣತಿ–2027ರ ಮನೆಗಳ ಪಟ್ಟಿ ಮತ್ತು ಜನಸಂಖ್ಯಾ ಗಣತಿ ಕಾರ್ಯವನ್ನು ಯಾವುದೇ ತಪ್ಪುಗಳಿಲ್ಲದಂತೆ ನಿಖರವಾಗಿ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಡಾ. ಆನಂದ ಕೆ. ಸೂಚಿಸಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ಭಾರತದ ಜನಗಣತಿ–2027ರ ಎರಡನೇ ಹಂತದ ಜನಸಂಖ್ಯಾ ಗಣತಿಗೆ ಸಂಬಂಧಿಸಿದಂತೆ ಜಿಲ್ಲೆಯ ನಗರ ಹಾಗೂ ಗ್ರಾಮೀಣ ಪ್ರದೇಶಗಳ ಚಾರ್ಜ್ ಅಧಿಕಾರಿಗಳು, ಸಹಾಯಕ ಚಾರ್ಜ್ ಅಧಿಕಾರಿಗಳು, ವಿಷಯ ನಿರ್ವಾಹಕರು ಮತ್ತು ತಾಂತ್ರಿಕ ನಿರ್ವಾಹಕ–ರಿಗೆ ಹಮ್ಮಿಕೊಂಡಿದ್ದ ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಜನಗಣತಿಯು ಹತ್ತು ವರ್ಷಗಳಿಗೊಮ್ಮೆ ನಡೆಯುವ ಪ್ರಮುಖ ಕಾರ್ಯವಾಗಿದೆ. ಇದರಲ್ಲಿ ಸಂಗ್ರಹಿಸುವ ಮಾಹಿತಿಯ ಆಧಾರದ ಮೇಲೆ ಮುಂದಿನ ಹತ್ತು ವರ್ಷಗಳ ಅಭಿವೃದ್ಧಿ, ಆರ್ಥಿಕ ಮತ್ತು ಸಾಮಾಜಿಕ ಯೋಜನೆಗಳನ್ನು ರೂಪಿಸಲಾಗುತ್ತದೆ. ಹೀಗಾಗಿ ಪ್ರತಿಯೊಂದು ಮನೆ, ಕುಟುಂಬ ಹಾಗೂ ವ್ಯಕ್ತಿಯ ಮಾಹಿತಿಯನ್ನು ಸರಿಯಾಗಿ ದಾಖಲಿಸಬೇಕು. ಯಾವುದೇ ಮನೆ ಅಥವಾ ವ್ಯಕ್ತಿ ಗಣತಿಯಿಂದ ಹೊರಗುಳಿಯದಂತೆ ಅಧಿಕಾರಿಗಳು ಗಮನಹರಿಸಬೇಕು ಎಂದರು.

ಜನಗಣತಿ ಕಾರ್ಯ ಸುಗಮವಾಗಿ ನಡೆಯಲು ಮೊದಲು ಮುಖ್ಯ ತರಬೇತಿದಾರರಿಗೆ, ನಂತರ ತಾಲೂಕು ಮಟ್ಟದ ತರಬೇತಿದಾರರಿಗೆ ಹಾಗೂ ಅಂತಿಮವಾಗಿ ಗಣತಿದಾರರು ಮತ್ತು ಮೇಲ್ವಿಚಾರಕರಿಗೆ ಹಂತ ಹಂತವಾಗಿ ತರಬೇತಿ ನೀಡಲಾಗುತ್ತದೆ. ಗಣತಿದಾರರು ಒಟ್ಟು 40 ಪ್ರಶ್ನೆಗಳಿಗೆ ಸಂಬಂಧಿಸಿದ ಮಾಹಿತಿಯನ್ನು ಹೇಗೆ ಸಂಗ್ರಹಿಸಬೇಕು ಹಾಗೂ ಗಣತಿದಾರರ ಕೈಪಿಡಿಯಲ್ಲಿರುವ ಸೂಚನೆಗಳನ್ನು ಹೇಗೆ ಪಾಲಿಸಬೇಕು ಎಂಬುದರ ಕುರಿತು ತರಬೇತಿ ನೀಡಲಾಗುತ್ತಿದೆ. ತರಬೇತಿಯಲ್ಲಿ ತಿಳಿಸುವ ಎಲ್ಲ ಅಂಶಗಳನ್ನು ಸರಿಯಾಗಿ ಅರ್ಥಮಾಡಿಕೊಂಡು ಜವಾಬ್ದಾ–ರಿಯಿಂದ ಕೆಲಸ ನಿರ್ವಹಿಸಬೇಕು ಎಂದು ತಿಳಿಸಿದರು.

ನಿಗದಿತ ಅವಧಿಯಲ್ಲಿ ಗಣತಿ ಪೂರ್ಣಗೊಳಿಸಿ: ಹಿಂದಿನ ಜನಗಣತಿ ಸಂದರ್ಭದಲ್ಲಿ ಮನೆಗಳ ಸಂಖ್ಯೆ ಗುರುತಿಸುವುದು, ನಂಬರ್ ಹಾಕುವುದು ಹಾಗೂ ಗುರುತು ಮಾಡುವ ಕಾರ್ಯಕ್ಕೆ ಆರಂಭದ ಕೆಲವು ದಿನಗಳು ವ್ಯಯವಾಗಿದ್ದವು. ಇದರಿಂದ ಗಣತಿ ಕಾರ್ಯದ ಪ್ರಗತಿಗೆ ತೊಂದರೆಯಾಗಿತ್ತು. ಈ ಬಾರಿ ಅಂತಹ ಸಮಸ್ಯೆ ಆಗದಂತೆ ಮುಂಚಿತವಾಗಿ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಸೂಚಿಸಿದರು. ಜನವರಿ 10ರಿಂದ 24ರವರೆಗೆ ಸ್ವಯಂ ಗಣತಿಗೆ ಅವಕಾಶವಿರುತ್ತದೆ. ಜನವರಿ 21ರಿಂದಲೇ ಗಣತಿದಾರರು ಮತ್ತು ಮೇಲ್ವಿಚಾರಕರು ತಮ್ಮ ವ್ಯಾಪ್ತಿಯ ಮನೆಗಳಿಗೆ ಭೇಟಿ ನೀಡಿ ಮನೆಗಳ ಸಂಖ್ಯೆ, ಗಡಿ ಹಾಗೂ ತಮ್ಮ ಕಾರ್ಯವ್ಯಾಪ್ತಿಯನ್ನು ಖಚಿತಪಡಿಸಿಕೊಳ್ಳಬೇಕು. ಗಣತಿದಾರರಿಗೆ ನೇಮಕಾತಿ ಆದೇಶ ಮತ್ತು ಗುರುತಿನ ಚೀಟಿ ನೀಡಬೇಕು. ಅವ–ರಿಗೆ ನಿಗದಿಪಡಿಸಿದ ನಕ್ಷೆಯಲ್ಲಿರುವ ಎಲ್ಲ ಮನೆಗಳಿಗೆ ಮುಂಚಿತವಾಗಿ ಭೇಟಿ ನೀಡಿ ಮನೆಗಳನ್ನು ಗುರುತಿಸಿ, ಸಂಖ್ಯೆ ಹಾಕುವ ಕಾರ್ಯ ಪೂರ್ಣಗೊಳಿಸಬೇಕು.




ಜನವರಿ 25ರಿಂದ ಫೆಬ್ರವರಿ 28ರವರೆಗೆ ಮನೆಗಳ ಪಟ್ಟಿ ಮತ್ತು ಜನಗಣತಿ ಕಾರ್ಯವನ್ನು ಪೂರ್ಣಗೊಳಿಸಬೇಕು. ಜನವರಿ 25ರಿಂದಲೇ ಮಾಹಿತಿ ದಾಖಲಿಸುವ ಕಾರ್ಯ ಆರಂಭವಾಗುವಂತೆ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ಔದ್ರಾಮ, ವಿಜಯಪುರ ಉಪವಿಭಾಗಾಧಿಕಾರಿ ಜುಫಿಶಾನ್ ಹಕ್, ಮಹಾನಗರ ಪಾಲಿಕೆ ಆಯುಕ್ತ ವಿಜಯ ಮೆಕ್ಕಳಕಿ ಸೇರಿದಂತೆ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು. ತರಬೇತಿದಾರ ವಿನೇಶ ಅವರು ಜನಗಣತಿ ಕಾರ್ಯದ ವಿಧಾನ, ಮಾಹಿತಿ ಸಂಗ್ರಹ, ಮೊಬೈಲ್‌ಯ್ಯಾಪ್ ಬಳಕೆ ಹಾಗೂ ಗಣತಿದಾರರು ಮತ್ತು ಮೇಲ್ವಿಚಾರಕರ ಜವಾಬ್ದಾರಿಗಳ ಕುರಿತು ತರಬೇತಿ ನೀಡಿದರು.


ಕನ್ನಡ ಪತ್ರಿಕೋದ್ಯಮದ ಬದ್ಧತೆಗೆ ಸಂದ ಗೌರವ

■ ಉದಯರಶ್ಮಿ ದಿನಪತ್ರಿಕೆ

'ಉದಯರಶ್ಮಿ' ದಿನಪತ್ರಿಕೆಯ ಸಂಪಾದಕರಾದ ಶ್ರೀ ಇಂದುಶೇಖರ ಮಣೂರ ಅವರಿಗೆ ವಿಜಯಪುರ ಜಿಲ್ಲಾ ರಾಜ್ಯೋತ್ಸವ ಪುರಸ್ಕಾರ ಗೌರವ! ಈ ಗೌರವಕ್ಕೆ ಸರ್ ಭಾಜನರಾಗಿರುವುದು ಅವರ ನಿರಂತರ ಪರಿಶ್ರಮ, ಸಾಮಾಜಿಕ ಕಳಕಳಿ ಹಾಗೂ ಪತ್ರಿಕೋದ್ಯಮದ ಬದ್ಧತೆಗೆ ಸಂದ ಮನ್ನಣೆಯಾಗಿದೆ.







ಪ್ರಶಾಂತ ಕುಲಕರ್ಣಿ.
ಉಪನ್ಯಾಸಕರು
ಸಿಂದಗಿ – ವಿಜಯಪುರ ಜಿಲ್ಲೆ

ಕನ್ನಡ ನಾಡು, ನುಡಿ, ಸಾಹಿತ್ಯ ಹಾಗೂ ಪತ್ರಿಕೋದ್ಯಮದ ಕ್ಷೇತ್ರದಲ್ಲಿ ತಮ್ಮದೇ ಆದ ಛಾಪು ಮೂಡಿಸಿರುವ ವಿಜಯಪುರ ಜಿಲ್ಲೆಯ ಹೆಸರಾಂತ 'ಉದಯರಶ್ಮಿ' ದಿನಪತ್ರಿಕೆಯ ಸಂಪಾದಕರಾದ ಶ್ರೀ ಇಂದುಶೇಖರ ಮಣೂರ ಅವರಿಗೆ ವಿಜಯಪುರ ಜಿಲ್ಲಾ ರಾಜ್ಯೋತ್ಸವ ಪುರಸ್ಕಾರ ದೊರೆತಿರುವುದು ಅತ್ಯಂತ ಸಂತೋಷದ ಮತ್ತು ಹೆಮ್ಮೆಯ ಸಂಗತಿ.

ಕನ್ನಡ ರಾಜ್ಯೋತ್ಸವದ ಅಂಗವಾಗಿ ಜಿಲ್ಲೆಯ ವಿವಿಧ ಕ್ಷೇತ್ರಗಳಲ್ಲಿ ಅನನ್ಯ ಸೇವೆ ಸಲ್ಲಿಸಿದ ಸಾಧಕರಿಗೆ ನೀಡಲಾಗುವ ಈ ಗೌರವಕ್ಕೆ ಸರ್ ಭಾಜನರಾಗಿರುವುದು ಅವರ ನಿರಂತರ ಪರಿಶ್ರಮ, ಸಾಮಾಜಿಕ ಕಳಕಳಿ ಹಾಗೂ ಪತ್ರಿಕೋದ್ಯಮದ ಬದ್ಧತೆಗೆ ಸಂದ ಮನ್ನಣೆಯಾಗಿದೆ. ನವೆಂಬರ್ 1ರಂದು ವಿಜಯಪುರ ನಗರದ ಡಾ. ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣದಲ್ಲಿ ನಡೆಯುವ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಜಿಲ್ಲೆಯ ಉಸ್ತುವಾರಿ ಸಚಿವರಾದ ಶ್ರೀ ಎಂ.ಬಿ. ಪಾಟೀಲ ಅವರಿಂದ ಗೌರವ ಸನ್ಮಾನಗೊಳ್ಳುತ್ತಿರುವುದು ಮತ್ತಷ್ಟು ಸಂತಸದ ಸಂಗತಿ. ನನಗೆ ಈ ಸಂತೋಷ ವೈಯಕ್ತಿಕವಾಗಿಯೂ ವಿಶೇಷವಾಗಿದೆ.

ಏಕೆಂದರೆ, ಒಬ್ಬ ಬರಹಗಾರನಾಗಿ ನನ್ನೊಳಗಿನ ಬರವಣಿಗೆಯ ಆಸಕ್ತಿಗೆ ಪ್ರೋತ್ಸಾಹ ನೀಡಿ, ತಮ್ಮ ಹೆಸರಾಂತ ಪತ್ರಿಕೆಯಲ್ಲಿ 'ಪ್ರಶಾಂತ ಪಥ' ಎಂಬ ಅಂಕಣದ ಮೂಲಕ ನನ್ನ ವಿಚಾರಗಳನ್ನು ಓದುಗರೊಂದಿಗೆ ಹಂಚಿಕೊಳ್ಳಲು ಅವಕಾಶ ಕಲ್ಪಿಸಿಕೊಟ್ಟವರು ನಮ್ಮ ಆತ್ಮೀಯ ಸಂಪಾದಕರಾದ ಶ್ರೀ ಇಂದುಶೇಖರ ಮಣೂರ ಸರ್. ಒಬ್ಬ ಬರಹಗಾರನಿಗೆ ಬರೆಯುವ ಅವಕಾಶ ನೀಡುವುದು ಎಂದರೆ ಕೇವಲ ವೇದಿಕೆ ಒದಗಿಸುವುದಲ್ಲ; ಅವನ ಆಲೋಚನೆಗಳಿಗೆ ಅಕ್ಷರ ರೂಪ ನೀಡಿ, ಅವನ ಅಭಿವ್ಯಕ್ತಿಗೆ ಹೊಸ ದಾರಿಯನ್ನು ತೆರೆದಂತೆಯೇ ಸರಿ.

ನನ್ನಂತಹ ಬರಹಗಾರನಿಗೆ ಪ್ರೋತ್ಸಾಹದ ಬೆಳಕಾಗಿ ನಿಂತಿರುವ ಸರ್ ಅವರಿಗೆ ಸಂದಿರುವ ಈ ಗೌರವವನ್ನು ಕಂಡು ಒಬ್ಬ ಬರಹಗಾರನಾಗಿ, 'ಉದಯರಶ್ಮಿ' ಪತ್ರಿಕೆಯ ಓದುಗನಾಗಿ ಹಾಗೂ ಅವರ ಅಭಿಮಾನಿಯಾಗಿ ಹೃದಯ ತುಂಬಿ ಬಂದಿದೆ. ಸರ್ ಅವರ ಸಾಧನೆ ನಮ್ಮೆಲ್ಲರಿಗೂ ಹೆಮ್ಮೆಯ ಸಂಗತಿ. ಅವರ ಮಾರ್ಗದರ್ಶನ, ಪ್ರೋತ್ಸಾಹ ಮತ್ತು ಸಾಹಿತ್ಯದ ಮೇಲಿನ ಪ್ರೀತಿ ಇನ್ನಷ್ಟು ಬರಹಗಾರರಿಗೆ ಸ್ಫೂರ್ತಿಯಾಗಲಿ ಎಂಬುದು ನನ್ನ ಆಶಯ. ಸರ್ ಅವರಿಗೆ ದೊರೆತಿರುವ ಈ ಪ್ರಶಸ್ತಿ ಕೇವಲ ವ್ಯಕ್ತಿಗತ ಗೌರವವಲ್ಲ; ಕನ್ನಡ ಪತ್ರಿಕೋದ್ಯಮದ ಬದ್ಧತೆಗೂ, ಸಾಹಿತ್ಯದ ಪ್ರೀತಿಗೂ ಹಾಗೂ ಸಮಾಜಮುಖಿ ಚಿಂತನೆಗೂ ಸಂದ ಗೌರವವಾಗಿದೆ. ಮುಂದಿನ ದಿನಗಳಲ್ಲಿಯೂ ಸರ್ ಅವರಿಂದ ಕನ್ನಡ ನಾಡು, ನುಡಿ, ಸಾಹಿತ್ಯ ಮತ್ತು ಸಮಾಜಕ್ಕೆ ಇನ್ನಷ್ಟು ಅಮೂಲ್ಯ ಕೊಡುಗೆಗಳು ದೊರೆಯಲಿ. ಅವರ ಸಾಧನೆಯ ಪಯಣ ಹೀಗೆಯೇ ನಿರಂತರವಾಗಿ ಸಾಗಲಿ. ಇನ್ನೂ ಅನೇಕ ಗೌರವಗಳು ಅವರನ್ನು ಅರಸಿ ಬರಲಿ ಎಂದು ಹಾರೈಸುತ್ತೇನೆ. ನಮ್ಮ ಆತ್ಮೀಯ ಸಂಪಾದಕರಾದ ಶ್ರೀ ಇಂದುಶೇಖರ ಮಣೂರ ಸರ್ ಅವರಿಗೆ ವಿಜಯಪುರ ಜಿಲ್ಲಾ ರಾಜ್ಯೋತ್ಸವ ಪುರಸ್ಕಾರ ದೊರೆತಿರುವುದಕ್ಕೆ ಹೃದಯಪೂರ್ವಕ ಅಭಿನಂದನೆಗಳು ಹಾಗೂ ಅನಂತ ಶುಭಾಶಯಗಳು.

ಮಹಾತ್ಮ ಗಾಂಧೀಜಿ ಚಿಂತನೆಗಳು ಇಂದಿಗೂ ಪ್ರಸ್ತುತ

■ ಉದಯರಶ್ಮಿ ದಿನಪತ್ರಿಕೆ



■ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ. ವಿಜಯಾ ಕೋರಿಶೆಟ್ಟಿ ಅಭಿಮತ

ವಿಜಯಪುರ: ಸತ್ಯ, ಅಹಿಂಸೆ ಮತ್ತು ಮಾನವೀಯ ಮೌಲ್ಯಗಳ ಮೂಲಕ ಜಗತ್ತಿಗೆ ಸಂದೇಶ ಸಾರಿದ ಮಹಾತ್ಮ ಗಾಂಧೀಜಿಯವರ ಚಿಂತನೆಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ. ವಿಜಯಾ ಕೋರಿಶೆಟ್ಟಿ ಹೇಳಿದರು.

ನಗರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಗಾಂಧಿ ಅಧ್ಯಯನ ಕೇಂದ್ರ ಹಾಗೂ ಆಗಸ್ಟ್ ಕ್ರಾಂತಿ ಟ್ರಸ್ಟ್ ಸಹಯೋಗದಲ್ಲಿ ಶನಿವಾರ ಹಮ್ಮಿಕೊಂಡಿದ್ದ 'ಗಾಂಧೀಜಿಯವರ ಚಿಂತನೆಗಳ ಪ್ರಸ್ತುತತೆ' ಕುರಿತ ವಿಶೇಷ ದತ್ತಿ ಉಪನ್ಯಾಸ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸತ್ಯ ಮತ್ತು ಅಹಿಂಸೆ ಗಾಂಧೀಜಿಯವರ ಪಾಲಿಗೆ ಕೇವಲ ಸಿದ್ಧಾಂತಗಳಾಗಿರಲಿಲ್ಲ. ಅವು ಬದುಕಿನ ಮೌಲ್ಯಗಳಾಗಿದ್ದವು. ಅನ್ಯಾಯ, ಶೋಷಣೆ ಮತ್ತು ಅಸಮಾನತೆಗಳ ವಿರುದ್ಧ ಅಹಿಂಸಾತ್ಮಕ ಹೋರಾಟದ ಮೂಲಕ ಪ್ರತಿರೋಧ ವ್ಯಕ್ತಪಡಿಸಿದ ಅವರು, ಅಧಿಕಾರಕ್ಕಿಂತ ನೈತಿಕತೆ ಹಾಗೂ ಹಿಂಸೆಗಿಂತ ಅಹಿಂಸೆಯೇ ಶ್ರೇಷ್ಠ ಎಂಬುದನ್ನು ತಮ್ಮ ಬದುಕಿನ ಮೂಲಕ ತೋರಿಸಿಕೊಟ್ಟಿದ್ದಾರೆ. ಇಂದಿನ ಯುವಜನತೆ ಗಾಂಧೀಜಿಯವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಚಿಂತಕ ಹಾಗೂ ಸಾಹಿತಿ ಮಂಜುನಾಥ ಜನಗೊಂಡ ಮಾತನಾಡಿ, ಅಹಿಂಸೆ ಎಂದರೆ ಅನ್ಯಾಯವನ್ನು ಸಹಿಸಿಕೊಂಡು ಮೌನವಾಗಿರುವುದಲ್ಲ.ಅನ್ಯಾಯದ ವಿರುದ್ಧ ಧೈರ್ಯದಿಂದ ನಿಲ್ಲುವ ಮನೋಭಾವವೂ ಅಹಿಂಸೆಯ ಭಾಗವಾಗಿದೆ. ಆತ್ಮಗೌರವ, ಮಾನವೀಯತೆ ಮತ್ತು ಸಾಮಾಜಿಕ ಜವಾಬ್ದಾರಿಗಳಿಗೆ ಪ್ರತಿಯೊಬ್ಬರೂ ಆದ್ಯತೆ ನೀಡಬೇಕು ಎಂದರು.

ಕುಲಸಚಿವ ಡಾ. ವಿಜಯಕುಮಾರ ಬಿ. ಅಜೂರ ಮಾತನಾಡಿ, ಆಗಸ್ಟ್ ಕ್ರಾಂತಿಯ ಐತಿಹಾಸಿಕ ಹಿನ್ನೆಲೆ ಹಾಗೂ ಸ್ವಾತಂತ್ರ ಹೋರಾಟದಲ್ಲಿ ಅದರ ಮಹತ್ವವನ್ನು ವಿವರಿಸಿದರು.

ಗಾಂಧಿ ಅಧ್ಯಯನ ಕೇಂದ್ರದ ಸಂಯೋಜಕ ಡಾ. ಮಾಲಿ ಪಾಟೀಲ್ ಪ್ರಾಸ್ತಾವಿಕ ನುಡಿಗಳನ್ನಾಡಿ, ಸ್ವಾಗತಿಸಿದರು. ಮೇಘಾ ಪಾಟೀಲ್ ಮುಖ್ಯ ಅತಿಥಿಗಳನ್ನು ಪರಿಚಯಿಸಿದರು. ಸಂಗೀತ ವಿಭಾಗದ ವಿದ್ಯಾರ್ಥಿನಿಯರಾದ ಶ್ರುತಿ ಮತ್ತು ವೀಣಾ ತಂಡದವರು ಹಾಡಿದರು. ವರ್ಷಾ ನಡಕಟ್ಟಿ ವಂದಿಸಿದರು. ಲಕ್ಷ್ಮಿ ದೇವಗಿರಿ ನಿರೂಪಿಸಿದರು.

ಅಕ್ರಮ ಕಂಟ್ರಿ ಪಿಸ್ತೂಲ್ ವಶ :ಇಬ್ಬರ ಬಂಧನ

■ ಉದಯರಶ್ಮಿ ದಿನಪತ್ರಿಕೆ





ಅಥಣಿ: ಅಕ್ರಮವಾಗಿ ಕಂಟ್ರಿ ಪಿಸ್ತೂಲ್ ಹಾಗೂ ಎರಡು ಜೀವಂತ ಗುಂಡುಗಳನ್ನು ಹೊಂದಿದ್ದ ಇಬ್ಬರು ಆರೋಪಿತರನ್ನು ಅಥಣಿ ಪೊಲೀಸರು ವಶಕ್ಕೆ ಪಡೆದು ಬಂಧಿಸಿದ್ದಾರೆ.

ಅಕ್ಟೋಬರ್ 30ರಂದು ಅಥಣಿ ಪೊಲೀಸ್ ಠಾಣೆಯ ಪೊಲೀಸ್ ನಿರೀಕ್ಷಕ ಎಲ್.ಬಿ. ಅಗ್ನಿ ಅವರು ಸರ್ಕಾರದ ಪರವಾಗಿ ದೂರು ದಾಖಲಿಸಿದ್ದಾರೆ.


ಪ್ರಕರಣದ ಮೊದಲನೇ ಆರೋಪಿ ಆಸೀಫ್ ಅಷ್ಪಾಕಹುಸೇನ್ ದೇಸಾಯಿ (25), ಅಥಣಿ ನಿವಾಸಿಯಾಗಿದ್ದು, ಪ್ರಸ್ತುತ ಪಾರ್ಥನಹಳ್ಳಿಯಲ್ಲಿ ವಾಸವಾಗಿದ್ದಾನೆ. ಈತ ಗುಂಡೇವಾಡಿ ಗ್ರಾಮದ ವಿಕ್ರಮ ಅಲಿಯಾಸ್ ವಿಕ್ಕಿ ಕಾಂಬಳೆ ಎಂಬಾತನಿಂದ 50,000 ನೀಡಿ ಒಂದು ಕಂಟ್ರಿ ಪಿಸ್ತೂಲ್ ಹಾಗೂ ಎರಡು ಜೀವಂತ ಗುಂಡುಗಳನ್ನು ಖರೀದಿಸಿದ್ದಾನೆ ಎನ್ನಲಾಗಿದೆ. ನಂತರ ಅವುಗಳನ್ನು ಅಥಣಿಯ ಹುದ್ದಾರ ನಗರದ ಅಂಕುಶ ರಾಜು ರೊಡ್ಡನ್ನವರ ಎಂಬಾತನಿಗೆ ಮಾರಾಟ ಮಾಡುವ ಉದ್ದೇಶದಿಂದ ತನ್ನ ವಶದಲ್ಲಿಟ್ಟುಕೊಂಡಿದ್ದ ಸಂದರ್ಭದಲ್ಲಿ ಪೊಲೀಸರು ದಾಳಿ ನಡೆಸಿ ಕಂಟ್ರಿ ಪಿಸ್ತೂಲ್ ಹಾಗೂ ಎರಡು ಜೀವಂತ ಗುಂಡುಗಳನ್ನು ಜಪ್ತಿ ಮಾಡಿದ್ದಾರೆ.

ಈ ಸಂಬಂಧ ಇಬ್ಬರು ಆರೋಪಿತರನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಿಕೊಂಡಿರುವ ಅಥಣಿ ಪೊಲೀಸರು ಮುಂದಿನ ತನಿಖೆ ಕೈಗೊಂಡಿದ್ದಾರೆ.

ಹೂವಿನಹಿಪ್ಪರಗಿ ಗ್ರಾಮದಲ್ಲಿ ಕನ್ನಡ ರಾಜ್ಯೋತ್ಸವ ಹಾಗೂ ವಾಲ್ಮೀಕಿ ಜಯಂತಿ ಆಚರಣೆ

ರಾಮಾಯಣ ಮಾನವನ ಬದುಕಿಗೆ ದಾರಿದೀಪ :ಬಸನಗೌಡ

■ ಉದಯರಶ್ಮಿ ದಿನಪತ್ರಿಕೆ



ಹೂವಿನಹಿಪ್ಪರಗಿ: ಮಹರ್ಷಿ ವಾಲ್ಮೀಕಿ ಬರೆದ ರಾಮಾಯಣ ಕೇವಲ ಮಹಾಕಾವ್ಯವಲ್ಲ. ಇದು ಮಾನವನ ಬದುಕಿಗೆ ದಾರಿದೀಪ ಎಂದು ದೇವರಹಿಪ್ಪರಗಿ ಮತಕ್ಷೇತ್ರದ ಬಿಜೆಪಿ ಮುಖಂಡ ಬಸನಗೌಡ ಪಾಟೀಲ(ಯಡಿಯಾಪೂರ) ಹೇಳಿದರು. ತಾಲ್ಲೂಕಿನ ಹೂವಿನಹಿಪ್ಪರಗಿ ಗ್ರಾಮದ ಮಹರ್ಷಿ ವಾಲ್ಮೀಕಿ ವೃತ್ತದಲ್ಲಿ ಭಾನುವಾರ ಜರುಗಿದ ಕನ್ನಡ ರಾಜ್ಯೋತ್ಸವ ಹಾಗೂ ವಾಲ್ಮೀಕಿ ಜಯಂತಿಯಲ್ಲಿ ಪಾಲ್ಗೊಂಡು ಮಾತನಾಡಿದರು.

71ನೇ ಕನ್ನಡ ರಾಜ್ಯೋತ್ಸವ ನಮಗೆ ನಾಡು,ನುಡಿ, ನೆಲ, ಜಲದ ಮಹತ್ವ ತಿಳಿಸುತ್ತದೆ . ಇಂದು ವಾಲ್ಮೀಕಿ ವೃತ್ತದ ನಿರ್ಮಾಣಕ್ಕೆ ವೈಯಕ್ತಿಕವಾಗಿ 50 ಸಾವಿರ ದೇಣಿಗೆ ನೀಡಲಾಗುತ್ತಿದೆ ಎಂದರು.

ಪತ್ರಿವನಮಠದ ದ್ರಾಕ್ಷಾಯಣಿ ಅಮ್ಮನವರು ಮಾತನಾಡಿ, ಮಹರ್ಷಿ ವಾಲ್ಮೀಕಿಯ ತಪಸ್ಸು, ತ್ಯಾಗ ಇವು ಸಾಧನೆಯ ಪ್ರತೀಕಗಳಾಗಿವೆ. ಅವರು ತೋರಿದ ಸನ್ಮಾರ್ಗದಲ್ಲಿ ನಾವೆಲ್ಲರೂ ನಡೆಯೋಣ ಎಂದರು.

ಗ್ರಾಮದ ಮುಖಂಡ ಪ್ರಕಾಶ ಪಾಟೀಲ ಮತನಾಡಿ, ಮನುಷ್ಯ ಪ್ರಯತ್ನಿಸಿದರೇ ಏನೆಲ್ಲಾ ಸಾಧನೆ ಮಾಡಬಹುದು ಎನ್ನುವುದಕ್ಕೆ ಮಹರ್ಷಿ ವಾಲ್ಮೀಕಿ ಜೀವನವೇ ಸಾಕ್ಷಿ. ಶಿಕ್ಷಣ ಹಾಗೂ ಸಂಸ್ಕಾರದಿಂದ ಸಮಾಜದ ಅಭಿವೃದ್ಧಿ ಸಾಧ್ಯ ಎನ್ನುವುದನ್ನು ಮಹರ್ಷಿ ತಿಳಿಸಿದ್ದಾರೆ ಎಂದರು.

ಕಾಂಗ್ರೆಸ್ ಮುಖಂಡ ಅಶೋಕಗೌಡ ಪಾಟೀಲ, ಸಂಗನಗೌಡ ಲಿಂಗದಳ್ಳಿ, ರಮೇಶ ಕೋರಿ, ಪಿ.ಜಿ.ಗೋಟೆದ, ಬಸನಗೌಡ ಪಾಟೀಲ, ಶ್ರೀಶೈಲ ಬಿರಾದಾರ, ಪರಮೇಶ ಬಿರಾದಾರ, ಮುತ್ತು ವಂದಾಲ, ಸಂಗಪ್ಪ ಹೊರಗಿನಮನಿ, ಶಿವು ಬಿರಾದಾರ, ಸಿದ್ದು ಮೇಟಿ ಸೇರಿದಂತೆ ಗ್ರಾಮಸ್ಥರು ಇದ್ದರು.

ಕೊಲ್ಹಾರದಲ್ಲಿ ತಾಲೂಕು ಆಡಳಿತದಿಂದ ಆಯೋಜಿಸಿದ್ದ 71ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮ

ಕನ್ನಡ ಅಂಕಿಗಳ ಬಳಕೆಯಿಂದ ಭಾಷೆ ಉಳಿಸಿ :ಪ.ಗು.ಸಿದ್ದಾಪುರ

■ ಉದಯರಶ್ಮಿ ದಿನಪತ್ರಿಕೆ



ಕೊಲ್ಹಾರ: ಕನ್ನಡ ನಾಡು, ನುಡಿ, ಭಾಷೆ ಹಾಗೂ ಸಂಸ್ಕೃತಿಯ ರಕ್ಷಣೆ ಪ್ರತಿಯೊಬ್ಬ ಕನ್ನಡಿಗನ ಆದ್ಯ ಕರ್ತವ್ಯವಾಗಿದ್ದು, ಕನ್ನಡದ ಅಸ್ಮಿತೆಯನ್ನು ಉಳಿಸಿ ಬೆಳೆಸಲು ಎಲ್ಲರೂ ಕೈಜೋಡಿಸಬೇಕು ಎಂದು ತಹಶೀಲ್ದಾರ್ ಸಂತೋಷ ಮ್ಯಾಗೇರಿ ಹೇಳಿದರು.

ಪಟ್ಟಣದ ಎಂ.ಪಿ.ಎಸ್. ಶಾಲಾ ಮೈದಾನದ ಸಭಾಂಗಣದಲ್ಲಿ ಭಾನುವಾರ ತಾಲೂಕು ಆಡಳಿತ ವತಿಯಿಂದ ಆಯೋಜಿಸಿದ್ದ 71ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು.

ಅಖಂಡ ಕರ್ನಾಟಕ ನಿರ್ಮಾಣಕ್ಕಾಗಿ ಶ್ರಮಿಸಿದ ಹೋರಾಟಗಾರರ ತ್ಯಾಗ, ಪರಿಶ್ರಮ ಹಾಗೂ ಕನ್ನಡ ನಾಡಿನ ಇತಿಹಾಸವನ್ನು ಸ್ಮರಿಸುವುದರ ಜೊತೆಗೆ ಮುಂದಿನ ಪೀಳಿಗೆಗೆ ಕನ್ನಡದ ಶ್ರೀಮಂತ ಪರಂಪರೆಯನ್ನು ಪರಿಚಯಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದರು.

ಮುಖ್ಯ ಉಪನ್ಯಾಸ ನೀಡಿದ ಮಕ್ಕಳ ಸಾಹಿತಿ, ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಪ.ಗು. ಸಿದ್ದಾಪುರ ಮಾತನಾಡಿ, ಕನ್ನಡ ರಾಜ್ಯೋತ್ಸವ ಕನ್ನಡಿಗರ ಹೆಮ್ಮೆಯ ಹಬ್ಬವಾಗಿದೆ. ಕನ್ನಡ ಭಾಷೆಯ ಉಳಿವಿಗಾಗಿ ಕನ್ನಡ ಅಂಕಿಗಳನ್ನು ದೈನಂದಿನ ವ್ಯವಹಾರಗಳಲ್ಲಿ ಹೆಚ್ಚಾಗಿ ಬಳಸಬೇಕು. ಅಖಂಡ ಕರ್ನಾಟಕ ನಿರ್ಮಾಣದಲ್ಲಿ ಕವಿಗಳು, ಸಾಹಿತಿಗಳು, ಹೋರಾಟಗಾರರು ಹಾಗೂ ರಾಜಕೀಯ ನಾಯಕರ ಒಗ್ಗಟ್ಟು ಮಹತ್ವದ ಪಾತ್ರ ವಹಿಸಿದೆ. ಅವರ ಪರಿಶ್ರಮದ ಫಲವಾಗಿ ಸುಂದರ ಕರ್ನಾಟಕ ನಿರ್ಮಾಣವಾಗಿದೆ. ಕನ್ನಡಿಗರು ಭಾಷಾಭಿಮಾನವನ್ನು ಕೇವಲ ರಾಜ್ಯೋತ್ಸವಕ್ಕೆ ಸೀಮಿತಗೊಳಿಸದೆ ನಿತ್ಯ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಪಟ್ಟಣಪಂಚಾಯಿತಿಅಧ್ಯಕ್ಷದಸ್ತಗೀರಕಲಾದಗಿಮಾತನಾಡಿ, ಪಟ್ಟಣದ ಎಲ್ಲ ಅಂಗಡಿ–ಮುಂಗಟ್ಟುಗಳ ನಾಮಫಲಕಗಳನ್ನು ಕನ್ನಡದಲ್ಲಿಯೇ ಅಳವಡಿಸುವ ಮೂಲಕ ಕನ್ನಡ ಭಾಷೆಯ ಉಳಿವಿಗೆ ಪಟ್ಟಣ ಪಂಚಾಯಿತಿ ಬದ್ಧವಾಗಿದೆ ಎಂದರು.

ಸನ್ಮಾನ: ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಕನ್ನಡ ವಿಷಯದಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ನೂತನ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಕೆ.ಎಸ್. ಬಾಲಗೊಂಡ, ಹೆಸ್ಕಾಂ ಅಧಿಕಾರಿ ಬಾಪು ಇಳಗೇರ, ಕೆಎಸ್‌ಆರ್‌ಟಿಸಿ ಅಧಿಕಾರಿ ಸುರೇಶ ಚಲವಾದಿ ಹಾಗೂ ನಾಡು–ನುಡಿಗಾಗಿ ಶ್ರಮಿಸುತ್ತಿರುವ ಕರವೇ ಅಧ್ಯಕ್ಷ ರವಿ ಗೊಳಸಂಗಿ ಅವರನ್ನು ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಪಟ್ಟಣ ಪಂಚಾಯಿತಿ ಉಪಾಧ್ಯಕ್ಷೆ ರಾಜಮಾ ನದಾಫ, ತಾ.ಪಂ. ಕಾರ್ಯನಿರ್ವಹಣಾಧಿಕಾರಿ ಸುನೀಲ ಮದ್ದಿನ, ಪಂಚ ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂತೋಷ ಗಣಾಚಾರಿ, ಮಾಜಿ ಪಟ್ಟಣ ಪಂಚಾಯಿತಿ ಅಧ್ಯಕ್ಷ ಸಿ.ಎಸ್. ಗಿಡ್ಡಪ್ಪಗೋಳ,ಪಿಎಸ್‌ಐಅಶೋಕನಾಯ್ಕ,ಲಕ್ಷ್ಮೀತಲ್ಲೂರ,ಎಂ.ಕೆ. ಪುರೋಹಿತ, ವೆಂಕಟೇಶ ವಾಲಿಕಾರ, ವ್ಹಿ.ಎಚ್. ಪುರೋಹಿತ, ಮನು ಪತ್ತಾರ, ಡೂಣೂರ ಸರ್, ಶಿವಶರಣ ತಡಲಗಿ, ಸಂಗಮೇಶ ಜಂಗಮಶೆಟ್ಟಿ ಸೇರಿದಂತೆ ಪಟ್ಟಣ ಪಂಚಾಯಿತಿ ಸದಸ್ಯರು, ಕನ್ನಡಪರ ಸಂಘಟನೆಗಳ ಪದಾಧಿಕಾರಿಗಳು, ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ನಾಗರಿಕರು ಉಪಸ್ಥಿತರಿದ್ದರು.

ಎಸ್.ಎ. ಪಾಟೀಲ ನಿರೂಪಿಸಿದರು. ಎಸ್.ಟಿ. ಯಡಹಳ್ಳಿ ಸ್ವಾಗತಿಸಿದರು. ವ್ಹಿ.ಜಿ. ಕುಲಕರ್ಣಿ ವಂದಿಸಿದರು.

ಆಕರ್ಷಕ ಮೆರವಣಿಗೆ

ಕನ್ನಡ ರಾಜ್ಯೋತ್ಸವದ ಅಂಗವಾಗಿ ಪಟ್ಟಣದ ಆಟೋ ಚಾಲಕರು ತಮ್ಮ ಆಟೋಗಳಲ್ಲಿ ಕನ್ನಡ ನಾಡಿನ ರಾಜ–ಮಹಾರಾಜರು, ಕವಿಗಳು, ಸಂತರು, ವಚನಕಾರರು ಹಾಗೂ ತಾಯಿ ಭುವನೇಶ್ವರಿ ದೇವಿಯ ಭಾವಚಿತ್ರಗಳನ್ನು ಅಳವಡಿಸಿ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಿದರು. ವಿವಿಧ ಕಲಾ ತಂಡಗಳ ಪ್ರದರ್ಶನ ಹಾಗೂ ವಿದ್ಯಾರ್ಥಿಗಳ ಪ್ರಭಾತ್‌ಫೇರಿ ಕಾರ್ಯಕ್ರಮಕ್ಕೆ ಮತ್ತಷ್ಟು ಮೆರುಗು ನೀಡಿದವು.

ಕಬ್ಬಿಗೆ 5,500 ದರ ನಿಗದಿಗೆ ಆಗ್ರಹಿಸಿ ರಾಜ್ಯ ಹೆದ್ದಾರಿ ತಡೆದು ರೈತರ ಪ್ರತಿಭಟನೆ | 5,500 ದರ ನೀಡದಿದ್ದರೆ ಹೋರಾಟ ತೀವ್ರ | ರೈತರ ಎಚ್ಚರಿಕೆ

ಚಡಚಣ ಬಂದ್‌ಗೆ ಸಂಪೂರ್ಣ ಬೆಂಬಲ; ಪಟ್ಟಣ ಸ್ತಬ್ಧ!



ಚಡಚಣ: ಕಬ್ಬಿಗೆ ಪ್ರತಿ ಟನ್‌ಗೆ ಕನಿಷ್ಠ 5,500 ದರ ನಿಗದಿಪಡಿಸಬೇಕು ಹಾಗೂ ರೈತರ ವಿವಿಧ ಬೇಡಿಕೆಗಳನ್ನು ಈಡೇರಿಸಬೇಕೆಂದು ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಕರೆ ನೀಡಿದ್ದ ಕರ್ನಾಟಕ ಬಂದ್‌ಗೆ ಚಡಚಣ ಪಟ್ಟಣ ಸೇರಿದಂತೆ ತಾಲೂಕಿನಾದ್ಯಂತ ಉತ್ತಮ ಬೆಂಬಲ ವ್ಯಕ್ತವಾಯಿತು. ರೈತರು ರಾಜ್ಯ ಹೆದ್ದಾರಿ ತಡೆದು ಪ್ರತಿಭಟನೆ ನಡೆಸುವ ಮೂಲಕ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಪಟ್ಟಣದ ಲಿಂಗಸುಗೂರು–ಶಿರಾಡೋಣ ರಾಜ್ಯ ಹೆದ್ದಾರಿಯಲ್ಲಿ ರಸ್ತೆ ತಡೆ ನಡೆಸಿದ ರೈತರು, ಕಬ್ಬಿಗೆ ನ್ಯಾಯಯುತಬೆಲೆನೀಡುವಂತೆಘೋಷಣೆಕೂಗಿದರು.

ಈ ಸಂದರ್ಭದಲ್ಲಿ ಹಿರಿಯ ರೈತ ಮುಖಂಡ ಮುರುಗೇಂದ್ರ ಸಿಂಪಿ ಮಾತನಾಡಿ, ಪ್ರಸಕ್ತ ವರ್ಷ ಕೃಷಿ ವೆಚ್ಚ ಗಣನೀಯವಾಗಿ ಹೆಚ್ಚಾಗಿದೆ. ರಸಗೊಬ್ಬರ, ಬಿತ್ತನೆ ಬೀಜ, ಕೂಲಿ ಸೇರಿದಂತೆ ಕೃಷಿಗೆ ಬೇಕಾದ ಪ್ರತಿಯೊಂದು ವಸ್ತುವಿನ ಬೆಲೆಯೂ ಏರಿಕೆಯಾಗಿದೆ. ಆದರೆ ರೈತರು ಬೆಳೆದ ಬೆಳೆಗಳಿಗೆ ಮಾತ್ರ ಸಮರ್ಪಕ ಬೆಲೆ ದೊರೆಯುತ್ತಿಲ್ಲ. ಹೀಗಿರುವಾಗ ಹಿಂದಿನ ವರ್ಷಗಳ ದರವನ್ನು ಮುಂದುವರಿಸುವುದು ರೈತರಿಗೆ ಅನ್ಯಾಯ ಮಾಡಿದಂತಾಗುತ್ತದೆ. ಕಬ್ಬಿಗೆ ಕನಿಷ್ಠ 5,500 ದರ ನೀಡುವ ಮೂಲಕ ಸರ್ಕಾರ ರೈತರ ನೆರವಿಗೆ ಬರಬೇಕು ಎಂದು ಆಗ್ರಹಿಸಿದರು.

ಬರ ಪರಿಹಾರವಾಗಿ ಸರ್ಕಾರ ನೀಡುತ್ತಿರುವ 2,500 ರೈತರಿಗೆ ಮಾಡಿದ ಅವಮಾನವಾಗಿದೆ. ಪರಿಹಾರ ಪಡೆಯಲು 17 ಷರತ್ತುಗಳನ್ನು ವಿಧಿಸಿರುವುದರಿಂದ ರೈತರು ಕಚೇರಿಗಳಿಗೆ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಪರಿಹಾರ ನೀಡುವ ಬದಲು ದಾಖಲೆಗಳ ನೆಪದಲ್ಲಿ ರೈತರನ್ನು ಸತಾಯಿಸಲಾಗುತ್ತಿದೆ. ಸರ್ಕಾರಕ್ಕೆ ನಿಜವಾಗಿಯೂ ರೈತರಬಗ್ಗೆಕಾಳಜಿಇದ್ದರೆಷರತ್ತುಗಳನ್ನುಸರಳಗೊಳಿಸಿ ಸೂಕ್ತ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು.

ರೈತ ಮುಖಂಡ ಮಹಾದೇವ ಹಿರೇಕುರಬರ ಮಾತನಾಡಿದರು.

ಪ್ರತಿಭಟನೆಯ ಹಿನ್ನೆಲೆಯಲ್ಲಿ ಲಿಂಗಸುಗೂರು–ಶಿರಾಡೋಣ ರಾಜ್ಯ ಹೆದ್ದಾರಿಯನ್ನು ಸುಮಾರು ಗಂಟೆಗಳ ಕಾಲ ಬಂದ್ ಮಾಡಲಾಯಿತು. ಪಟ್ಟಣದ ಅಂಗಡಿ–ಮುಂಗಟ್ಟುಗಳನ್ನು ಬಂದ್ ಮಾಡಿಸಿ, ಸಾರಿಗೆ ಸಂಚಾರ ಸ್ಥಗಿತಗೊಳಿಸಲಾಯಿತು. ಅಲ್ಲದೆ, ಪಂಢರಪುರಕ್ಕೆ ಸಂಪರ್ಕ ಕಲ್ಪಿಸುವ ರಾಷ್ಟ್ರೀಯ ಹೆದ್ದಾರಿಯನ್ನು ಬಸವೇಶ್ವರ ವೃತ್ತದಲ್ಲಿ ಸುಮಾರು ನಾಲ್ಕೈದು ಗಂಟೆಗಳ ಕಾಲ ತಡೆದು ರೈತರು ಪ್ರತಿಭಟನೆ ನಡೆಸಿದರು. ಇದರಿಂದ ಪ್ರಯಾಣಿಕರು ಹಾಗೂ ವಾಹನ ಸವಾರರು ತೀವ್ರ ತೊಂದರೆ ಅನುಭವಿಸಿದರು.

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಅಧ್ಯಕ್ಷ ಚೂನಪ್ಪ ಪೂಜಾರಿ ಮತ್ತು ಶ್ರೀಕಾಂತ ಗುರೂಜಿಅವರನೇತೃತ್ವದಲ್ಲಿಕರೆನೀಡಲಾಗಿದ್ದಕರ್ನಾಟಕ ಬಂದ್‌ಗೆ ಚಡಚಣ ಪಟ್ಟಣ ಮತ್ತು ಸುತ್ತಮುತ್ತಲಿನ ಗ್ರಾಮಗಳಲ್ಲಿ ರೈತರು, ವ್ಯಾಪಾರಸ್ಥರು ಹಾಗೂ ವಿವಿಧ ಜನಪರ ಸಂಘ–ಸಂಸ್ಥೆಗಳು ಬೆಂಬಲ ಸೂಚಿಸಿದವು.

ಹೋರಾಟದಲ್ಲಿ ಮಹಾದೇವ ಕರ್ಲಮಳ, ಗೇನಪ್ಪ ಬಿರಾದಾರ, ರಮೇಶ ನಾವಿ, ಕಾಶಿರಾಯ ಕಾಮಗೊಂಡ, ಭೀಮಶಂಕರ ಉಮರಾಣಿ, ಪ್ರಕಾಶ ಬತಗುಣಕಿ, ಶಕೀಲ್ ಕಾಟಿಕ್ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ರೈತ ಮುಖಂಡರು ಹಾಗೂ ನೂರಾರು ರೈತರು ಭಾಗವಹಿಸಿದ್ದರು.

ಮಗುವಿನ ಚಿಕ್ಕ ಕೋರಿಕೆ ದೇವರು ಅಸ್ತು ಎಂದ ಪರಿ

■ ಉದಯರಶ್ಮಿ ದಿನಪತ್ರಿಕೆ

ಪ್ರತಿ ಶಿಕ್ಷಕಿಯು ತನ್ನ ಮಕ್ಕಳಿಗೇ ಉತ್ತಮ ಅಮ್ಮಆಗಲು ಬಯಸುತ್ತಾಳೆ. ಅದೇ ರೀತಿ ಮಗು ಮನೆಯಲ್ಲಿರುವುದನ್ನು ತನ್ನ ಜೊತೆ ಆಟ ಆಡಿ ಸಮಯ ಕಳೆಯುವುದನ್ನು ಅಮ್ಮ ತನ್ನೊಂದಿಗೆ ಚೆನ್ನಾಗಿ ಮಾತನಾಡುವುದನ್ನು ತನಗಾಗಿ ಸಮಯ ಮೀಸಲು ಇಡುವುದನ್ನು ತಾನು ಆಡುವ ಮಾತನ್ನು ಅಮ್ಮ ಕೇಳಿಸಿಕೊಂಡು ಖುಷಿಪಡುವ, ನಗು ಮುಖವನ್ನು ನೋಡಲು ಇಷ್ಟಪಡುತ್ತದೆ. ಅಲ್ಲದೆ ಮಗುವಿನ ಜೊತೆಗೆ ಅಮ್ಮ ಕಳೆಯುವ ಸಮಯ ತನಗೆ ಒದಗಿ ಬಂದ ಸುವರ್ಣ ಅವಕಾಶ ಎಂದು ಮಗು ಭಾವಿಸುತ್ತದೆ.

ಅಂತಹದೇ ಒಂದು ಪುಟ್ಟ ಮಗುವಿನ ಕಥೆ





ಇದು

ಅಮ್ಮ ಮಗು ಒಂದೇ ಶಾಲೆಯಲ್ಲಿ ತಾಯಿ ಶಿಕ್ಷಕಿಯಾಗಿ, ಮಗು ವಿದ್ಯಾರ್ಥಿಯಾಗಿ ಇರುವಂತಹ ಅವಕಾಶ ಕೆಲ ತಾಯಂದಿರಿಗೆ ಮಾತ್ರ ಲಭಿಸುತ್ತದೆ. ತಾಯಿ ದೊಡ್ಡ ವರ್ಗದ ಭೋದನೆಯಲ್ಲಿ ಶಿಕ್ಷಕಿ(ಅಮ್ಮ). ಮುಂಜಾನೆಯಿಂದ ಸಂಜೆಯವರೆಗೂ ಬಿಡುವಿಲ್ಲದೆ ವರ್ಗಗಳು ನಡೆಯುತ್ತಿರುತ್ತವೆ.

ಅದೇ ಶಾಲೆಯಲ್ಲಿ ವಿದ್ಯಾರ್ಥಿಯಾದ

ಮಿನಿ ಕಥೆ

ಮಗು ಪೂರ್ವ ಪ್ರಾಥಮಿಕ ವರ್ಗದಲ್ಲಿ ವ್ಯಾಸಂಗ ಮಾಡುವಾಗ ಮಗುವಿನ ವರ್ಗ ಕೇವಲ ಮಧ್ಯಾಹ್ನದವರೆಗೆ ಮಾತ್ರ ಇದ್ದು ಸಂಜೆಯವರೆಗೂ ಮಗು ಅದೇ ಶಾಲೆಯಲ್ಲಿ ತಾನೊಬ್ಬಳೇ ಕಾಲ ಕಳೆಯುವುದು ಬೇಡ ಎನಿಸಿದಾಗ ಅಮ್ಮನನ್ನು ಮಗು ಪೀಡಿಸುತ್ತದೆ. ಅಮ್ಮ ನಿನಗೆ ಮಧ್ಯಾಹ್ನ ಹೆಚ್ಚಿನ ತರಗತಿ ಇರಬಾರದು ಎಂದು ನಾನು ದೇವರಲ್ಲಿ(ಗಣೇಶ) ನಿಗೆ ಬೇಡಿಕೊಳ್ಳುತ್ತೇನೆ ಎಂದು ಕೇಳಿದಾಗ, ದೈವಲೀಲೆಯೋ ಏನೋ ಕಾಣೆ, ಅಂದು ಅಮ್ಮನಿಗೆ ಹೆಚ್ಚಿನ ವರ್ಗಗಳಿರಲಿಲ್ಲವಂತೆ. ಮಗುವಿನ ಮುಗ್ದ ಮನಸ್ಸಿನ ಮಾತನ್ನು ಕೋರಿಕೆಯನ್ನು ಭಗವಂತ ಸ್ವೀಕರಿಸುತ್ತಾನೆ ಎಂಬುದಕ್ಕೆ ಇದೇ ಸಾಕ್ಷಿ ನೋಡಿ ಎಂದು ಅವರ ತಾಯಿ ನನ್ನ ಹತ್ತಿರ ಹೇಳಿದ ಒಂದು ಚಿಕ್ಕ ಕಥೆಯನ್ನು ನನ್ನ ಶಬ್ದದಲ್ಲಿ ಹಿಡಿದಿಡುವ ಕೆಲಸವನ್ನು ಮಾಡಿದ್ದೇನೆ.

ಅಮ್ಮ ಮಗುವಿನ ಪ್ರೀತಿ ಭಗವಂತನಿಗೂ ಇಷ್ಟ ಎನ್ನುವುದಕ್ಕೆ ಈ ಕಥೆ ಸಾಕ್ಷಿಯಾಗಿದೆ.

■ ಶಿಲ್ಪಾ,ಮೃತ್ಯುಂಜಯ, ಮಿಣಜಿಗಿ.
ಶಿಕ್ಷಕರು
ಧಾರವಾಡ

ಅಥಣಿಯಲ್ಲಿ ನಡೆದ ಕರ್ನಾಟಕ ರಾಜ್ಯೋತ್ಸವ ದಿನಾಚರಣೆಯಲ್ಲಿ ತಹಶೀಲ್ದಾರ್ ಸಿದರಾಯ ಭೋಸಗಿ ಅಭಿಮತ

ಕನ್ನಡ ಕೇವಲ ಭಾಷೆಯಲ್ಲ ನಮ್ಮ ಬದುಕು–ಸಂಸ್ಕೃತಿ–ಸ್ವಾಭಿಮಾನ

■ ಉದಯರಶ್ಮಿ ದಿನಪತ್ರಿಕೆ



ಅಥಣಿ: ಕರ್ನಾಟಕ ಕನ್ನಡ ಎಂದರೆ ಕೇವಲ ಒಂದು ಭಾಷೆಯಲ್ಲ,ಅದು ನಮ್ಮ ಬದುಕು, ನಮ್ಮ ಸಂಸ್ಕೃತಿ ಅದು ನಮ್ಮ ಸ್ವಾಭಿಮಾನ ಹಾಗೂ ನಮ್ಮ ಆದ್ಯತೆಯಾಗಿದೆ. ವಿವಿಧ ಪ್ರಾಂತ್ಯಗಳಲ್ಲಿದ್ದ ಕನ್ನಡಿಗರನ್ನು ಒಂದೇ ತಾಯಿಯ ಗೂಡಿಗೆ ತರಲು ಹತ್ತು ಹಲವು ಹಿರಿಯರು ನಡೆಸಿದ ಹೋರಾಟ ಮತ್ತು "ಕರ್ನಾಟಕ ಏಕೀಕರಣ"ದ ಫಲವಾಗಿ ಇಂದು ಅಖಂಡ ಕರ್ನಾಟಕ ನಿರ್ಮಾಣವಾಗಿದೆ ನಾವೆಲ್ಲರೂ ಜಾಗರೂಕತೆಯಿಂದ ಕನ್ನಡ ನಾಡು–ನುಡಿಯನ್ನು ಉಳಿಸಿ ಬೆಳೆಸಬೇಕು ಎಂದು ತಹಶೀಲ್ದಾರ್ ಸಿದರಾಯ ಭೋಸಗಿ ಕನ್ನಡಿಗರಿಗೆ ಕರೆ ನೀಡಿದರು.

ಅಥಣಿಯ ಶ್ರೀ ಭೋಜರಾಜ ದೇಸಾಯಿ ಕ್ರೀಡಾಂಗಣದಲ್ಲಿ ಕರ್ನಾಟಕ ಸರ್ಕಾರ ಅಥಣಿ ತಾಲೂಕು ಆಡಳಿತದ ವತಿಯಿಂದ ರವಿವಾರ ಜರುಗಿದ 71ನೇ ಕರ್ನಾಟಕ ರಾಜ್ಯೋತ್ಸವ ದಿನಾಚರಣೆಯಲ್ಲಿ ರಾಷ್ಟ್ರ ಧ್ವಜಾರೋಹಣ ಹಾಗೂ ಭುವನೇಶ್ವರಿ ದೇವಿಯ ಪೂಜಾ ಕಾರ್ಯಕ್ರಮ ನೆರವೇರಿಸಿ ಮಾತನಾಡಿದ ತಹಶೀಲ್ದಾರ್ ಭೋಸಗಿ ಅವರು, ಕರ್ನಾಟಕ ಸಾವಿರಾರು ವರ್ಷಗಳ ಭವ್ಯ ಇತಿಹಾಸವನ್ನು ಹೊಂದಿದೆ. ಕನ್ನಡ ಅಭಿಮಾನ ಮಾತ್ರ ಹೊಂದಿದರೆ ಸಾಲದು ಅದನ್ನು ಮುಂದಿನ ಪೀಳಿಗೆಗೆ ವರ್ಗಾಯಿಸುವ ಜವಾಬ್ದಾರಿ ಎಲ್ಲರ ಮೇಲಿದೆ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಶ್ರೀಮತಿ ಶಿವಲೀಲಾ ಸ. ಬೂಟಾಳಿ, ಅಧ್ಯಕ್ಷರು, ಪುರಸಭೆ, ಅಥಣಿ, ಶ್ರೀಮತಿ ಭುವನೇಶ್ವರಿ ಬೀ. ಯಕ್ಕಂಚಿ, ಉಪಾಧ್ಯಕ್ಷರು, ಪುರಸಭೆ, ಅಥಣಿ ಮಾತನಾಡಿದರು.

ಈ ವೇಳೆ ಪತ್ರಿಕಾರಂಗದಲ್ಲಿ ಸಾಧನೆ ಮಾಡಿದ ಪ್ರಜಾವಾಣಿ ವರದಿಗಾರ ಪರಶುರಾಮ ನಂದೇಶ್ವರ, ಉದಯವಾಣಿ ವರದಿಗಾರ ಪ್ರಕಾಶ ಪೂಜಾರಿ ಹಾಗೂ ಸಾಹಿತ್ಯ ಕ್ಷೇತ್ರದಲ್ಲಿ ಚುಸಾಪ ಅಧ್ಯಕ್ಷ ಸಾಹಿತಿ ಡಾ ರಾಮಣ್ಣ ದೊಡ್ಡನಿಂಗಪ್ಪಗೋಳ, ಸಾಮಾಜಿಕ ಕ್ಷೇತ್ರದಲ್ಲಿ ಶಶಿಧರ ಬರ್ಲಿ, ನ್ಯಾಯವಾದಿ ಡಿ ಬಿ ಟಕ್ಕಣ್ಣವರ,ಕನ್ನಡ ಪರ ಸಂಘಟನೆಗಳ ಸದಸ್ಯರು ಹಾಗೂ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸುಮಾರು 26 ಜನ ಸಾಧಕರಿಗೆ ತಾಲೂಕು ಆಡಳಿತದಿಂದ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

ವಿವಿಧ ಶಾಲಾ ಕಾಲೇಜುಗಳಿಂದ ಆಕರ್ಷಕ ಸ್ತಬ್ಧ ಚಿತ್ರಗಳ ಮೆರವಣಿಗೆ ಜರುಗಿತು. ಮಕ್ಕಳಿಂದ ವಿವಿಧ ಕನ್ನಡಪರ ಸಾಂಸ್ಕೃತಿಕ ವೈಭವ ಕಣ್ಮನ ಸೆಳೆಯಿತು.

ವೇದಿಕೆಯಲ್ಲಿ ಡಿ ವೈ ಎಸ್ ಪಿ ವೀರೇಂದ್ರಕುಮಾರ ಪಿ ಅಥಣಿ. ಎಂ. ಆರ್. ಮುಂಜೆ ಕ್ಷೇತ್ರ ಶಿಕ್ಷಣಾಧಿಕಾರಿಗಳು ಅಥಣಿ , ಶಿವಾನಂದ ಕಲ್ಲಾಪುರ ಕಾ ನಿ ಅಧಿಕಾರಿಗಳು, ತಾ.ಪಂ. ಅಥಣಿ, ಶ್ರೀಮತಿ ದಯಾ ಕೆ. ಜೋಶಿ ಪ್ರಭಾರ ಮುಖ್ಯಾಧಿಕಾರಿಗಳು, ಪುರಸಭೆ, ಅಥಣಿ, ಸಂತೋಷ ಹಳ್ಳೂರ ಸಿ.ಪಿ.ಐ, ಅಥಣಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಮಾಳಿಂಗರಾಯ ಜಾತ್ರೋತ್ಸವ: ವಿವಿಧ ಕಾರ್ಯಕ್ರಮಗಳು

■ ಉದಯರಶ್ಮಿ ದಿನಪತ್ರಿಕೆ

ಕೆಂಭಾವಿ: ಕರ್ನಾಟಕದ ಹುಲಿಜಂತಿ ಎಂದೇ ಪ್ರಖ್ಯಾತಿ ಪಡೆದಿರುವ ಯಾದಗಿರಿ ಜಿಲ್ಲೆಯ ಸುರಪುರ ತಾಲೂಕಿನ ಕೆಂಭಾವಿ ಪಟ್ಟಣದ ಸಮೀಪವಿರುವ ಸುಕ್ಷೇತ್ರ ಮಾಲಹಳ್ಳಿ ಗ್ರಾಮದ ಆರಾಧ್ಯ ದೈವ ಶ್ರೀ ಮಾಳಿಂಗರಾಯ ದೇವರ ದೀಪಾವಳಿ ಹಬ್ಬದ ಜಾತ್ರೋತ್ಸವದ ಅಂಗವಾಗಿ ಪ್ರತಿ ವರ್ಷದಂತೆ ಈ ವರ್ಷವೂ ಕೂಡ ವಿವಿಧ ಸಾಂಸ್ಕೃತಿ–ಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ದೇವಸ್ಥಾನದ ಸಮಿತಿ ತಿಳಿಸಿದೆ.

ದಿನಾಂಕ 08–11–2026 ರ ರವಿವಾರ ಬೆಳಿಗ್ಗೆ 9ಗಂಟೆಗೆ ಓಪನ್ ಕಬಡ್ಡಿ ಪಂದ್ಯಾವಳಿ ಜರುಗುವುದು ಪ್ರಥಮ ಬಹುಮಾನ 11001. ದ್ವಿತೀಯ 6001.ತೃತೀಯ 3001. ಚತುರ್ಥ 1001. ಪ್ರವೇಶ ಶುಲ್ಕ 500. ನಿಗದಿ ಪಡಿಸಿದೆ.

ದಿನಾಂಕ 09–11–2026 ರ ಸೋಮವಾರ ಬೆಳಿಗ್ಗೆ 11 ಗಂಟೆಗೆ ರಾಜ್ಯ ಮಟ್ಟದ ರಸಪ್ರಶ್ನೆ ಕಾರ್ಯಕ್ರಮ ಇರುತ್ತದೆ.



ಪ್ರಥಮ ಬಹುಮಾನ 10001. ದ್ವಿತೀಯ ಬಹುಮಾನ 5001. ತೃತೀಯ 2501 ರೂ ಗಳನ್ನು ನೀಡಿ ಸತ್ಕರಿಸಲಾಗುವುದು, ಪ್ರವೇಶ ಶುಲ್ಕ 200. ನಿಗದಿ ಪಡಿಸಲಾಗಿದೆ. ದಿನಾಂಕ 11–11–2026 ರ ಬುಧವಾರದಂದು ಬೆಳಿಗ್ಗೆ 10 ಗಂಟೆಗೆ ಭಾರ (ಚೀಲ ಎತ್ತುವ ಸ್ಪರ್ಧೆ) ಜರುಗುತ್ತದೆ ಪ್ರಥಮ ಬಹುಮಾನ 8001ರೂ ಬೆಳ್ಳಿ ಕಡಗ ದ್ವಿತೀಯ 4001 ನಿಗದಿಪಡಿಸಿದೆ ಹಾಗೂ ಅದೇ ದಿನ ಮದ್ಯಾಹ್ನ 2 ಗಂಟೆಗೆ ಪ್ರಖ್ಯಾತ ಕುಸ್ತಿಪಟುಗಳಿಂದ ಕುಸ್ತಿ ಪಂದ್ಯಾವಳಿ ಜರುಗುವುದು, ಅಂ–ದು ರಾತ್ರಿ 10 ಗಂಟೆಗೆ ಪ್ರತಿಭಾ ಪುರಸ್ಕಾರ ಹಾಗೂ ಶ್ರೀ ಕರಿಸಿದ್ದೇಶ್ವರ ಕೃಪಾ ಮಾಳಿಂಗರಾಯ ಮಹಿಮೆ ಹಾಗೂ ದೈಗೊಂಡ ಗೌಡರ ದರ್ಬಾರ ಭಂಡಾರದಿಂದ ಉದ್ದಾರ ಎಂಬ ಹಾಲುಮತ ಭಕ್ತಿ ಪ್ರಧಾನವಾದ ಸತ್ಯ ಸಿದ್ದರ ಮಾರ್ಗ ಎಂಬ ನಾಟಕ ಜರುಗುವುದು.ಈ ಎಲ್ಲಾ ಕಾರ್ಯಕ್ರಮಗಳಿಗೆ ನೆರೆ ರಾಜ್ಯಗಳಿಂದ ಸುತ್ತಮುತ್ತಲಿನ ಜಿಲ್ಲೆಗಳಿಂದ ಗ್ರಾಮಗಳಿಂದ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ದೇವರ ಕೃಪೆಗೆ ಪಾತ್ರರಾಗಬೇಕೆಂದು ದೇವಸ್ಥಾನ ಸಮಿತಿ ಮನವಿ ಮಾಡಿದೆ. ಹಾಗೂ ಜಾತ್ರೆ ಮುಗಿಯುವವರೆಗೂ ಪ್ರತಿದಿನ ಅನ್ನಪ್ರಸಾದ ಇರುತ್ತದೆ ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಬಹುದು ಮೊಬೈಲ್ ನಂಬರ್, 8105860255. 9844445728, 9945154343. 9902619811.

ಶಿಕ್ಷಕ ಗುಂಡಪ್ಪ ಕುಂಬಾರ ಗೆ ರಾಜ್ಯೋತ್ಸವ ಪುರಸ್ಕಾರ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯ ದೇವರ ಹಿಪ್ಪರಗಿ ತಾಲೂಕಿನ ಯಾಳವಾರ ಗ್ರಾಮದ ಹಿರಿಯ ಕಲಾವಿದ, ಸಾಹಿತಿ ಹಾಗೂ ಸಧ್ಯ ಜಾಲವಾದ ಗ್ರಾಮದಲ್ಲಿರುವ ಕೆಪಿ–ಎಸ್ ಪ್ರೌಢಶಾಲೆಯಲ್ಲಿ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿರುವ ಚಿತ್ರಕಲಾ ಶಿಕ್ಷಕ ಗುಂಡಪ್ಪ ಕುಂಬಾರ ಅವರು ಭಾನುವಾರ ಜಿಲ್ಲಾ ರಾಜ್ಯೋತ್ಸವ ಪುರಸ್ಕಾರಕ್ಕೆ ಭಾಜನರಾದರು.



ಕರ್ನಾಟಕ ರಾಜ್ಯೋತ್ಸವ ಅಂಗವಾಗಿ ಜಿಲ್ಲೆಯ ವಿವಿಧ ಕ್ಷೇತ್ರಗಳಲ್ಲಿ ಅನನ್ಯ ಸೇವೆ ಸಲ್ಲಿಸಿರುವ ಸಾಧಕರಿಗೆ ಈ ಗೌರವ ನೀಡಲಾಗುತ್ತದೆ.

ನವೆಂಬರ್ 1ರಂದು ನಗರದ ಡಾ.ಬಿ.ಆರ್.ಅಂಬೇಡ್ಕರ್ ಕ್ರೀಡಾಂಗಣದಲ್ಲಿ ನಡೆದ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ.ಪಾಟೀಲ, ಶಾಸಕ ಬಸನಗೌಡ ಪಾಟೀಲ ಯತ್ನಾಳ, ಜಿಲ್ಲಾಧಿಕಾರಿ ಡಾ.ಆನಂದ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಸೇರಿದಂತೆ ಗಣ್ಯರ ಸಮ್ಮುಖದಲ್ಲಿ ಬಹುಮುಖ ಪ್ರತಿಭೆಯ ಶಿಕ್ಷಕ ಗುಂಡಪ್ಪ ಕುಂಬಾರ ಅವರನ್ನು ಗೌರವಿಸಲಾಯಿತು.

ನಾಟಿ ವೈದ್ಯ ಭೀಮರಾಯ ಡಿಗ್ಗಿ ಗೆ ರಾಜ್ಯೋತ್ಸವ ಗೌರವ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ತಾಲೂಕಿನ ಕಟ್ಟಕಡೆಯ ಹಳ್ಳಿಯಾದ ಹೊನ್ನಳ್ಳಿ ಗ್ರಾಮದ ಹಿರಿಯ ನಾಟಿ ವೈದ್ಯ ಭೀಮರಾಯ ಸಂಗಪ್ಪ ಡಿಗ್ಗಿ ಅವರಿಗೆ 2026ನೇ ಸಾಲಿನ ತಾಲೂಕು ಮಟ್ಟದ ಕರ್ನಾಟಕ ರಾಜ್ಯೋತ್ಸವ ಪುರಸ್ಕಾರ ನೀಡಿ ಗೌರವಿಸಲಾಗಿದೆ.

ತಾಲೂಕಾ ಆಡಳಿತ, ತಾಲೂಕು ಕರ್ನಾಟಕ ರಾಜ್ಯೋತ್ಸವ ಸಮಿತಿ, ಕನ್ನಡ ಸಾಹಿತ್ಯ ಪರಿಷತ್ತು ಘಟಕ ಸಿಂದಗಿ ಇವುಗಳ ಸಹಯೋಗದಲ್ಲಿ ನಗರದ ಡಾ. ಬಿ. ಆರ್. ಅಂಬೇಡ್ಕರ್ ಭವನದಲ್ಲಿ ನಡೆದ 71 ನೆ ಕರ್ನಾಟಕ ರಾಜ್ಯೋತ್ಸವ ಸಮಾರಂಭದಲ್ಲಿ ಅವರನ್ನು ಸನ್ಮಾನಿಸಲಾಯಿತು.

ಗ್ರಾಮೀಣ ಭಾಗದಲ್ಲಿ ನಾಟಿ ವೈದ್ಯ ಪದ್ಧತಿಯ ಮೂಲಕ ಹಲವು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಭೀಮರಾಯ ಸಂಗಪ್ಪ ಡಿಗ್ಗಿ ಅವರು, ತಮ್ಮ ಸಾಂಪ್ರದಾಯಿಕ ವೈದ್ಯಕೀಯ ಜ್ಞಾನ ಹಾಗೂ ಅನುಭವದ ಮೂಲಕ ಹಲವಾರು ರೋಗಿಗಳಿಗೆ ಚಿಕಿತ್ಸೆ ನೀಡುತ್ತಾ ಬಂದಿದ್ದಾರೆ. ವಿಶೇಷವಾಗಿ ಬಡ ಹಾಗೂ ಆರ್ಥಿಕವಾಗಿ ಹಿಂದುಳಿದ ಜನ–ರಿಗೆ ಉಚಿತವಾಗಿ ಚಿಕಿತ್ಸೆ ನೀಡುವ ಮೂಲಕ ಮಾನವೀಯ ಸೇವೆ ಸಲ್ಲಿಸಿದ್ದಾರೆ.

ಆಯುರ್ವೇದ ಹಾಗೂ ನಾಟಿ ವೈದ್ಯ ಪರಂಪರೆಯನ್ನು ಮುಂದುವರಿಸಿಕೊಂಡು ಹೋಗುವ ಮೂಲಕ ಗ್ರಾಮೀಣ ಭಾಗದಲ್ಲಿ ಸಾಂಪ್ರದಾಯಿಕ ವೈದ್ಯ ಪದ್ಧತಿಯ ಉಳಿವಿಗೆ ಶ್ರಮಿಸುತ್ತಿದ್ದಾರೆ. ಇವರ ನಿಸ್ವಾರ್ಥ–ʼ ಸೇವೆ ಹಾಗೂ ವೈದ್ಯಕೀಯ ಕ್ಷೇತ್ರದಲ್ಲಿನ ಕೊಡುಗೆಯನ್ನು ಗುರುತಿಸಿ ತಾಲೂಕು ಆಡಳಿತವು ರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಿದೆ.

ತಾಲೂಕಿನ ಕಟ್ಟಕಡೆಯ ಹಳ್ಳಿಯಲ್ಲಿ ನೆಲೆಸಿ, ಯಾವುದೇ ಪ್ರತಿಫಲಾಪೇಕ್ಷೆಯಿಲ್ಲದೆ ಬಡವರ ಆರೋಗ್ಯ ಸೇವೆಯಲ್ಲಿ ತೊಡಗಿಸಿಕೊಂಡಿರುವ ಭೀಮರಾಯ ಡಿಗ್ಗಿ ಅವರಿಗೆ ಸಂದ ಈ ಪ್ರಶಸ್ತಿ ಹೊನ್ನಳ್ಳಿ



ಕಲಾವಿದ ಈರಣ್ಣ ಬಡಿಗೇರ ಗೆ ರಾಜ್ಯೋತ್ಸವ ಪುರಸ್ಕಾರ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕೊಲಾಜ್ ಕಲೆಯ ಮೂಲಕ ಸೃಜನಶೀಲತೆ, ಕಲಾತ್ಮಕ ನೈಪುಣ್ಯ ಹಾಗೂ ವಿಶಿಷ್ಟ ಅಭಿವ್ಯಕ್ತಿಯನ್ನು ಅನಾವರಣ ಗೊಳಿಸುತ್ತಿರುವ ಜಿಲ್ಲೆಯ ಸಿಂದಗಿ ಪಟ್ಟಣದ ಕಲಾವಿದ ಈರಣ್ಣ ಬಡಿಗೇರ ಅವರು ಭಾನುವಾರ ಜಿಲ್ಲಾ ರಾಜ್ಯೋತ್ಸವ ಪುರಸ್ಕಾರಕ್ಕೆ ಭಾಜನ ರಾದರು. ಕರ್ನಾಟಕ ರಾಜ್ಯೋತ್ಸವ ಅಂಗವಾಗಿ ಜಿಲ್ಲೆಯ ವಿವಿಧ ಕ್ಷೇತ್ರಗಳಲ್ಲಿ ಅನನ್ಯ ಸೇವೆ ಸಲ್ಲಿಸಿರುವ ಸಾಧಕರಿಗೆ ಈ ಗೌರವ ನೀಡಲಾಗುತ್ತದೆ. ನವೆಂಬರ್ 1ರಂದು ನಗರದ ಡಾ.ಬಿ.ಆರ್.ಅಂಬೇಡ್ಕರ್ ಕ್ರೀಡಾಂಗಣದಲ್ಲಿ ನಡೆದ ಕರ್ನಾಟಕ ರಾಜ್ಯೋತ್ಸವ ಕಾರ್ಯ ಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ.ಪಾಟೀಲ, ಶಾಸಕ ಬಸನಗೌಡ ಪಾಟೀಲ ಯತ್ನಾಳ, ಜಿಲ್ಲಾಧಿಕಾರಿ ಡಾ.ಆನಂದ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಸೇರಿದಂತೆ ಗಣ್ಯರ ಸಮ್ಮುಖದಲ್ಲಿ ಬಹುಮುಖ ಪ್ರತಿಭೆಯ ಈರಣ್ಣ ಬಡಿಗೇರ ಅವರನ್ನು ಗೌರವಿಸಲಾಯಿತು.

ಅಂಗೈಯಲ್ಲಿ ಜಗತ್ತು, ಆತಂಕದಲ್ಲಿ ಖಾಸಗಿತನ!

ಬದುಕನ್ನು ಸುಂದರಗೊಳಿಸಬೇಕಾದ ತಂತ್ರಜ್ಞಾನ, ಬೆನ್ನಿಗಂಟಿದ ಬೇತಾಳವಾಗಬಾರದು. ಮನುಷ್ಯನ ಕೈಯಲ್ಲಿರುವ ಸಾಧನ ಅವನ ಬದುಕನ್ನು ಬೆಳಗಬೇಕೇ ಹೊರತು ಅವನ ಖಾಸಗಿತನವನ್ನು ಕತ್ತಲೆಗೆ ತಳ್ಳಬಾರದು! ತಂತ್ರಜ್ಞಾನದ ಕಣ್ಗಾವಲಿನಲ್ಲಿ ಕಳೆದುಹೋಗುತ್ತಿದೆಯೇ ಮನುಷ್ಯನ ಖಾಸಗಿತನ?

■ ಉದಯರಶ್ಮಿ ದಿನಪತ್ರಿಕೆ

ಜಾಗತೀಕರಣ ಮತ್ತು ತಂತ್ರಜ್ಞಾನದ ಬೆಳವಣಿಗೆಯಿಂದ ಜಗತ್ತು ಇಂದು ಅಂಗೈಯಲ್ಲಿ ಕುಣಿಯುತ್ತಿದೆ. ದೇಶಗಳ ನಡುವಿನ ಗಡಿಗಳು ಸಂಪರ್ಕದ ದೃಷ್ಟಿಯಿಂದ ಅರ್ಥ ಕಳೆದುಕೊಳ್ಳುತ್ತಿವೆ. ಮಾಹಿತಿ ವಿನಿಮಯ ಕ್ಷಣಾರ್ಧದಲ್ಲಿ ನಡೆಯುತ್ತಿದೆ.



ಆದರೆ ಈ ತಾಂತ್ರಿಕ ಪ್ರಗತಿಯ ನಡುವೆ ಮನುಷ್ಯನ ಖಾಸಗಿಬದುಕಿನಗಡಿಗಳೂಅಳಿಸಿಹೋಗುತ್ತಿರುವುದು ಆತಂಕಕಾರಿ ಬೆಳವಣಿಗೆ. ಜಗತ್ತನ್ನು ಹತ್ತಿರ ತರುವ ತಂತ್ರಜ್ಞಾನ ನಮ್ಮ ವೈಯಕ್ತಿಕ ಸ್ವಾತಂತ್ರ್ಯವನ್ನೇ ಕಸಿದುಕೊಳ್ಳುವಂತಾದರೆ ಅದನ್ನು ಪ್ರಗತಿ ಎನ್ನಬೇಕೋ, ಪರೋಕ್ಷ ಬಂಧನ ಎನ್ನಬೇಕೋ?


ಒಂದು ಕಾಲದಲ್ಲಿ ಮನುಷ್ಯ ತನ್ನ ಮನೆಯ ನಾಲ್ಕು ಗೋಡೆಗಳ ನಡುವೆ ನೆಮ್ಮದಿಯಿಂದ ಬದುಕುತ್ತಿದ್ದ. ತನ್ನ ಆಲೋಚನೆ, ಅಭಿಪ್ರಾಯ, ಸಂಬಂಧ ಮತ್ತು ವೈಯಕ್ತಿಕ ನಿರ್ಧಾರಗಳಿಗೆ ಅವನೇ ಒಡೆಯನಾಗಿದ್ದ. ಆದರೆ ಇಂದು ಪರಿಸ್ಥಿತಿ ಬದಲಾಗಿದೆ. ನಾವು ಎಲ್ಲಿಗೆ ಹೋಗುತ್ತೇವೆ, ಯಾರೊಂದಿಗೆ ಮಾತನಾಡುತ್ತೇವೆ, ಏನನ್ನು ಹುಡುಕುತ್ತೇವೆ, ಯಾವುದನ್ನು ಇಷ್ಟಪಡುತ್ತೇವೆ ಎಂಬ ಮಾಹಿತಿಯೆಲ್ಲ ಡಿಜಿಟಲ್ ಜಗತ್ತಿನಲ್ಲಿ ಒಂದಲ್ಲ ಒಂದು ರೂಪದಲ್ಲಿ ದಾಖಲಾಗುತ್ತಿದೆ. ನಮ್ಮ ಪ್ರತಿಯೊಂದು ಹೆಜ್ಜೆಯನ್ನೂ ಯಾವುದೋ ಅದೃಶ್ಯ ಕಣ್ಣು ಗಮನಿಸುತ್ತಿದೆಯೇನೋ ಎಂಬ ಅನುಮಾನ ಕಾಡತೊಡಗಿದೆ.

ತಂತ್ರಜ್ಞಾನ ನಮಗೆ ಸೌಕರ್ಯಗಳನ್ನು ಕೊಟ್ಟಿದೆ. ಆದರೆ ಆ ಸೌಕರ್ಯಗಳ ಬೆನ್ನಲ್ಲೇ ನಮ್ಮ ಖಾಸಗಿತನವನ್ನು ಬೆನ್ನಿಗಂಟಿದ ಬೇತಾಳದಂತೆ ಹಿಂಬಾಲಿಸುವ ಕಣ್ಗಾವಲು ವ್ಯವಸ್ಥೆಯೂ ಬೆಳೆಯುತ್ತಿದೆ.

ನಾವು ಬಳಸುವ ಡಿಜಿಟಲ್ ಸಾಧನಗಳು ನಮ್ಮ ಅಗತ್ಯಗಳನ್ನು ಸುಲಭಗೊಳಿಸುವುದರ ಜೊತೆಗೆ ನಮ್ಮ ಆಸಕ್ತಿ, ಅಭಿರುಚಿ ಮತ್ತು ನಡವಳಿಕೆಗಳ ಮಾಹಿತಿಯನ್ನು ಸಂಗ್ರಹಿಸುವ ಸಾಮರ್ಥ್ಯ ಹೊಂದಿವೆ. ಈ ಮಾಹಿತಿ ಯಾರ ಕೈ ಸೇರುತ್ತದೆ? ಯಾವ ಉದ್ದೇಶಕ್ಕೆ ಬಳಕೆಯಾಗುತ್ತದೆ? ಅದರ ಮೇಲೆ ನಮಗೆ ಎಷ್ಟು ನಿಯಂತ್ರಣವಿದೆ? ಎಂಬ ಪ್ರಶ್ನೆಗಳಿಗೆ ಸ್ಪಷ್ಟ ಉತ್ತರ ದೊರೆಯುವುದು ಎಲ್ಲ ಸಂದರ್ಭಗಳಲ್ಲೂ ಸುಲಭವಲ್ಲ.

ಇನ್ನೊಂದು ಆತಂಕಕಾರಿ ಸಂಗತಿಯೆಂದರೆ ಸಾಮಾಜಿಕ ಜಾಲತಾಣಗಳಲ್ಲಿ ಹೆಚ್ಚುತ್ತಿರುವ ಅನಗತ್ಯ ಹಸ್ತಕ್ಷೇಪ. ವ್ಯಕ್ತಿಯ ಖಾಸಗಿ ಬದುಕು, ಸಂಬಂಧಗಳು, ವೈಯಕ್ತಿಕ ಆಯ್ಕೆಗಳು ಮತ್ತು ಅಭಿಪ್ರಾಯಗಳನ್ನೇ ಸಾರ್ವಜನಿಕ ಚರ್ಚೆಯ ವಸ್ತುಗಳನ್ನಾಗಿ ಮಾಡಲಾಗುತ್ತಿದೆ. ಯಾರೋ ಒಬ್ಬರು ತಮ್ಮ ಬದುಕಿನ ಕುರಿತು ತೆಗೆದುಕೊಂಡ ನಿರ್ಧಾರವನ್ನು ವಿಮರ್ಶಿಸುವ, ಟೀಕಿಸುವ ಮತ್ತು ತೀರ್ಪು ನೀಡುವ ಅಧಿಕಾರ ತಮಗೇ ಇದೆ ಎಂಬಂತೆ ಕೆಲವರು ವರ್ತಿಸುತ್ತಿದ್ದಾರೆ.

ಸಾಮಾಜಿಕ ಜಾಲತಾಣಗಳು ಅಭಿಪ್ರಾಯ ವಿನಿಮಯದ ವೇದಿಕೆಗಳಾಗಬೇಕಿತ್ತು. ಆ



ದರೆ ಕೆಲವೊಮ್ಮೆ ಅವು ಸ್ವಯಂಘೋಷಿತ ನ್ಯಾಯಾಲಯಗಳಾಗಿ ಬದಲಾಗುತ್ತಿರುವುದು ವಿಷಾದನೀಯ. ಇಲ್ಲಿ ವಿಚಾರಣೆಗೂ ಮುನ್ನವೇ ತೀರ್ಪು ಹೊರಬೀಳುತ್ತದೆ. ಸತ್ಯಾಸತ್ಯತೆ ಪರಿಶೀಲಿಸುವ ಮೊದಲೇ ಆರೋಪಗಳು ಹರಡುತ್ತವೆ. ವ್ಯಕ್ತಿಯ ಗೌರವ ಮತ್ತು ಮಾನಸಿಕ ನೆಮ್ಮದಿಗಿಂತ ಜನಪ್ರಿಯತೆ




ಹಾಗೂ ಕ್ಷಣಿಕ ಪ್ರತಿಕ್ರಿಯೆಗಳೇ ಮುಖ್ಯವಾಗುತ್ತವೆ.

*ಅಭಿವ್ಯಕ್ತಿ ಸ್ವಾತಂತ್ರ್ಯ ಎಂದರೆ ಇನ್ನೊಬ್ಬರ ಖಾಸಗಿ ಬದುಕಿನಲ್ಲಿ ಅತಿಕ್ರಮಣ ಮಾಡುವ ಪರವಾನಗಿ ಅಲ್ಲ. ನಮಗೆ ಮಾತನಾಡುವ ಹಕ್ಕಿರುವಂತೆ ಮತ್ತೊಬ್ಬರಿಗೆ ತಮ್ಮ ಆಯ್ಕೆಯಂತೆ ಬದುಕುವ ಹಕ್ಕೂ ಇದೆ. ನಮ್ಮ ಸ್ವಾತಂತ್ರ್ಯವನ್ನು ಗೌರವಿಸಬೇಕೆಂದು ಬಯಸುವ ನಾವು, ಇತರರ ಸ್ವಾತಂತ್ರ್ಯವನ್ನು ಗೌರವಿಸಲು ಹಿಂಜ–ರಿಯುವುದು ಎಂತಹ ವಿಪರ್ಯಾಸ!

ಹಿಂದೆ 'ಗೋಡೆಗಳಿಗೂ ಕಿವಿಗಳಿವೆ' ಎಂದು ಹಿರಿಯರು ಎಚ್ಚರಿಸುತ್ತಿದ್ದರು. ಆದರೆ ಇಂದು ಗೋಡೆಗಳಿಗಷ್ಟೇ ಅಲ್ಲ, ನಮ್ಮ ಸುತ್ತಲಿನ ಗಾಳಿಗೂ ಕಣ್ಣು ಮತ್ತು ಕಿವಿಗಳು ಬಂದಿವೆಯೇನೋ ಎಂಬ ಭಾವನೆ ಮೂಡುತ್ತಿದೆ. ಮನುಷ್ಯನ ಮಾತು, ನಗು, ಮೌನ ಮತ್ತು ಭಾವನೆಗಳೂ ಡಿಜಿಟಲ್ ಜಗತ್ತಿನಲ್ಲಿ ದಾಖಲಾಗಿ ಅನಿರೀಕ್ಷಿತವಾಗಿ ಸಾರ್ವಜನಿಕವಾಗುವ ಸಾಧ್ಯತೆ ಇದೆ. ಹೀಗಾಗಿ ವ್ಯಕ್ತಿ ತನ್ನ ಮನಸ್ಸಿನ ಮಾತನ್ನು ಮುಕ್ತವಾಗಿ ಹೇಳಿಕೊಳ್ಳುವುದಕ್ಕೂ ಹಿಂಜ–ರಿಯುವಂತಹ ವಾತಾವರಣ ನಿರ್ಮಾಣವಾಗುತ್ತಿದೆ.

ಖಾಸಗಿತನವೆಂದರೆ ಕೇವಲ ವೈಯಕ್ತಿಕ ಮಾಹಿತಿಯನ್ನು ರಹಸ್ಯವಾಗಿಡುವುದಲ್ಲ. ಅದು ಮನುಷ್ಯನ ಘನತೆ, ಸ್ವಾಭಿಮಾನ ಮತ್ತು ಸ್ವತಂತ್ರ ಅಸ್ತಿತ್ವದ ಅವಿಭಾಜ್ಯ ಅಂಗ. ಪ್ರತಿಯೊಬ್ಬ ವ್ಯಕ್ತಿಗೂ ತನ್ನ ಬದುಕಿನ ಕೆಲವು ಸಂಗತಿಗಳನ್ನು ತನ್ನಲ್ಲಿಯೇ ಉಳಿಸಿಕೊಳ್ಳುವ ಹಕ್ಕಿದೆ. ಆ ಹಕ್ಕನ್ನು ಗೌರವಿಸುವುದು ನಾಗರಿಕ ಸಮಾಜದ ಮೂಲಭೂತ ಕರ್ತವ್ಯ.

ತಂತ್ರಜ್ಞಾನವನ್ನು ಸಂಪೂರ್ಣವಾಗಿ ತಿರಸ್ಕರಿಸುವುದು ಈ ಸಮಸ್ಯೆಗೆ ಪರಿಹಾರವಲ್ಲ. ಏಕೆಂದರೆ ಶಿಕ್ಷಣ, ಆರೋಗ್ಯ, ಆಡಳಿತ, ಸಂವಹನ ಮತ್ತು ಆರ್ಥಿಕ ಚಟುವಟಿಕೆಗಳಲ್ಲಿ ಅದರ ಕೊಡುಗೆ ಅಪಾರ. ಆದರೆ ತಂತ್ರಜ್ಞಾನದ ಬಳಕೆಯೊಂದಿಗೆ ಜವಾಬ್ದಾ–ರಿಯೂ ಬೆಳೆಯಬೇಕು. ವೈಯಕ್ತಿಕ ಮಾಹಿತಿಯ ಸಂಗ್ರಹಣೆ ಮತ್ತು ಬಳಕೆಯಲ್ಲಿ ಪಾರದರ್ಶಕತೆ ಇರಬೇಕು. ಮಾಹಿತಿ ಸುರಕ್ಷತೆಗೆ ಪರಿಣಾಮಕಾರಿ ಕಾನೂನುಗಳಿರಬೇಕು. ಎಲ್ಲಕ್ಕಿಂತ ಮುಖ್ಯವಾಗಿ ಡಿಜಿಟಲ್ ಸಾಕ್ಷರತೆ ಮತ್ತು ನೈತಿಕ ಪ್ರಜ್ಞೆ ಸಮಾಜದಲ್ಲಿ ಬೆಳೆಯಬೇಕು. ಕಾನೂನುಗಳು ವ್ಯಕ್ತಿಯ ಮಾಹಿತಿಯನ್ನು ರಕ್ಷಿಸಬಹುದು. ಆದರೆ ಇನ್ನೊಬ್ಬರ ಖಾಸಗಿತನವನ್ನು ಗೌರವಿಸುವ ಸಂಸ್ಕಾರವನ್ನು ಕಾನೂನಿನಿಂದ ಮಾತ್ರ ಬೆಳೆಸಲು ಸಾಧ್ಯವಿಲ್ಲ. ಅದು ಮನುಷ್ಯನ ಮನಸ್ಸಿನಲ್ಲಿ ಮೂಡಬೇಕು. ತಂತ್ರಜ್ಞಾನ ಎಷ್ಟೇ ಬುದ್ಧಿವಂತವಾದರೂ ಅದನ್ನು ಬಳಸುವ ಮನುಷ್ಯ ವಿವೇಕ ಕಳೆದುಕೊಂಡರೆ ಅದರ ಪರಿಣಾಮ ಅಪಾಯಕಾರಿಯಾಗುತ್ತದೆ.



ಸಿದ್ಧಲಿಂಗ ಚೌಧರಿ.
ದೈಹಿಕ ಶಿಕ್ಷಣ ಶಿಕ್ಷಕರು
ಸಿಂದಗಿ – ವಿಜಯಪುರ ಜಿಲ್ಲೆ



ಕೊನೆಯ ಮಾತು

ಜಗತ್ತನ್ನು ನೋಡುವುದಕ್ಕೆ ನಮಗೆ ಮೂರನೇ ಕಣ್ಣು ಬೇಕಾಗಬಹುದು. ಆದರೆ ಆ ಕಣ್ಣು ಮತ್ತೊಬ್ಬರ ಖಾಸಗಿ ಬದುಕಿನೊಳಗೆ ಇಣುಕುವ ಸಾಧನವಾಗಬಾರದು. ತಂತ್ರಜ್ಞಾನ ಮನುಷ್ಯನ ಸೇವಕನಾಗಿರಬೇಕೇ ಹೊರತು ಅವನ ಸ್ವಾತಂತ್ರ್ಯವನ್ನು ನಿಯಂತ್ರಿಸುವ ಯಜಮಾನನಾಗಬಾರದು.

ಬದುಕನ್ನು ಸುಂದರಗೊಳಿಸಬೇಕಾದ ತಂತ್ರಜ್ಞಾನ, ಬೆನ್ನಿಗಂಟಿದ ಬೇತಾಳವಾಗಬಾರದು. ಮನುಷ್ಯನ ಕೈಯಲ್ಲಿರುವ ಸಾಧನ ಅವನ ಬದುಕನ್ನು ಬೆಳಗಬೇಕೇ ಹೊರತು ಅವನ ಖಾಸಗಿತನವನ್ನು ಕತ್ತಲೆಗೆ ತಳ್ಳಬಾರದು!

ಡಿ.ಎಂ.ಮಕಾಂದಾರ ಗೆ ಸಮಾಜ ಸೇವಾ ರತ್ನ ಪ್ರಶಸ್ತಿ

■ ಉದಯರಶ್ಮಿ ದಿನಪತ್ರಿಕೆ



ಅಥಣಿ: ಸಮಾಜ ಸೇವೆ, ಸಹಕಾರಿ ಕ್ಷೇತ್ರ ಹಾಗೂ ವಿವಿಧ ಸಾಮಾಜಿಕ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡು ಗಮನಾರ್ಹ ಸೇವೆ ಸಲ್ಲಿಸುತ್ತಿರುವ ಅಂತರಾಷ್ಟ್ರೀಯ ಮಾನವ ಹಕ್ಕುಗಳ ನ್ಯಾಯಾಂಗ ಸುರಕ್ಷಾ ಪರಿಷದ್ ದೆಹಲಿ, ಕರ್ನಾಟಕ ರಾಜ್ಯ ಅಧ್ಯಕ್ಷರಾದ ಡಿ ಎಂ ಮಕಾಂದಾರ ಬೆಂಗಳೂರು ಅವರಿಗೆ ಡಿಜಿಟಲ್ ಮೀಡಿಯಾ ಅಸೋಸಿಯೇಷನ್ ಆಫ್ ಕರ್ನಾಟಕ ವತಿಯಿಂದ ನೀಡಲಾಗುವ ಪ್ರತಿಷ್ಠಿತ 'ಸಮಾಜ ಸೇವಾ ರತ್ನ' ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ಸಮಾಜದಲ್ಲಿ ನಿಸ್ವಾರ್ಥವಾಗಿ ಸೇವೆ ಸಲ್ಲಿಸುತ್ತಿರುವ ಹಾಗೂ ಸಾಮಾಜಿಕ ಬದ್ಧತೆಯಿಂದ ವಿವಿಧ ಜನಪರ ಕಾರ್ಯಗಳಲ್ಲಿ ತೊಡಗಿಸಿಕೊಂಡಿರುವ ಕಾರ್ಯಕರ್ತರನ್ನು ಗುರುತಿಸಿ ಪ್ರೋತ್ಸಾಹಿಸುವ ಉದ್ದೇಶದಿಂದ ಈ ಪ್ರಶಸ್ತಿಯನ್ನು ನೀಡಲಾಗುತ್ತಿದೆ. ಸಮಾಜ ಸೇವೆ ಮತ್ತು ಸಹಕಾರಿ ಕ್ಷೇತ್ರದಲ್ಲಿ ಸಲ್ಲಿಸಿರುವ ಗಣನೀಯ ಕೊಡುಗೆ, ವಿವಿಧ ಸಾಮಾಜಿಕ ಚಟುವಟಿಕೆಗಳಲ್ಲಿ ಸಕ್ರಿಯ ಪಾಲ್ಗೊಳ್ಳುವಿಕೆ ಹಾಗೂ ಸಂಘಟನಾ ಕಾರ್ಯಕ್ಷಮತೆಯನ್ನು ಪರಿಗಣಿಸಿ ಡಿ.ಎಂ.ಮಕಾಂದಾರ್ ಅವರನ್ನು ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಡಿಜಿಟಲ್ ಮೀಡಿಯಾ ಅಸೋಸಿಯೇಷನ್ ಆಫ್ ಕರ್ನಾಟಕದ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ನವೆಂಬರ್ 5 ರಂದು ಬೆಳಗಾವಿಯಲ್ಲಿ ನಡೆಯಲಿರುವ ವಿಶೇಷ ಸಮಾರಂಭದಲ್ಲಿ 'ಸಮಾಜ ಸೇವಾ ರತ್ನ' ಪ್ರಶಸ್ತಿಯನ್ನು ಪ್ರದಾನ ಮಾಡಲಾಗುವುದು.

ನ.12 ರಂದು ಜಿಲ್ಲಾಮಟ್ಟದ ಯುವಜನೋತ್ಸವ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಯುವಜನರಲ್ಲಿ ಅಡಗಿರುವ ಸೃಜನಶೀಲ ಪ್ರತಿಭೆ ಹಾಗೂ ಕಲಾತ್ಮಕ ಅಭಿವ್ಯಕ್ತಿಯನ್ನು ಗುರುತಿಸಿ ಪ್ರೋತ್ಸಾಹಿಸುವ ಉದ್ದೇಶದಿಂದ 2026–27ನೇ ಸಾಲಿನ ಜಿಲ್ಲಾಮಟ್ಟದ ಯುವಜನೋತ್ಸವವನ್ನು ನವೆಂಬರ್ 12ರಂದು ಆಯೋಜಿಸಲಾಗಿದೆ. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಯೋಗದಲ್ಲಿ ನಗರದ ಗಾಂಧಿಚೌಕ್‌ನಲ್ಲಿರುವ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಅಂದು ಬೆಳಿಗ್ಗೆ 10.30ಕ್ಕೆ ಕಾರ್ಯಕ್ರಮ ನಡೆಯಲಿದೆ. ಯುವಜನೋತ್ಸವದಲ್ಲಿ ಜನಪದ ನೃತ್ಯ (ತಂಡ), ಜನಪದ ಗೀತೆ (ತಂಡ), ಚಿತ್ರಕಲೆ, ಬೀದಿ ನಾಟಕ (ನುಕ್ಕಡ್ ನಾಟಕ) ಹಾಗೂ ಕವಿತೆ ರಚನೆ ಸೇರಿದಂತೆ ಐದು ವಿಭಾಗಗಳಲ್ಲಿ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ.

ಜನಪದ ನೃತ್ಯ ಮತ್ತು ಜನಪದ ಗೀತೆ ಸ್ಪರ್ಧೆಗಳಲ್ಲಿ ತಲಾ 7+3 ಸದಸ್ಯರ ತಂಡಗಳಿಗೆ ಅವಕಾಶವಿದ್ದು, ಪ್ರದರ್ಶನಕ್ಕೆ 5ರಿಂದ 8 ನಿಮಿಷಗಳ ಕಾಲಾವಕಾಶ ನೀಡಲಾಗಿದೆ. ನಶಾ ಮುಕ್ತ ಯುವ ಸಮುದಾಯ ವಿಷಯಾಧಾರಿತ ಚಿತ್ರಕಲೆ ಸ್ಪರ್ಧೆಗೆ ಆರು ಗಂಟೆಗಳ ಕಾಲಾವಕಾಶ ನಿಗದಿಪಡಿಸಲಾಗಿದೆ. ನಶಾ ಮುಕ್ತ ಯುವ ಸಮುದಾಯ ವಿಷಯದ ಕುರಿತು ಬೀದಿ ನಾಟಕ (ನುಕ್ಕಾಡ್ ನಾಟಕ)ಸ್ಪರ್ಧೆಯಲ್ಲಿ 10 ಜನರ ತಂಡ ಭಾಗವಹಿಸಬಹುದಾಗಿದ್ದು, ಪ್ರದರ್ಶನಕ್ಕೆ ಏಳು ನಿಮಿಷಗಳ ಕಾಲಾವಕಾಶವಿದೆ. ಕವಿತೆ ರಚನೆ ಸ್ಪರ್ಧೆಗೆ ಒಂದು ಗಂಟೆ 30 ನಿಮಿಷಗಳ ಕಾಲಾವಕಾಶ ನೀಡಲಾಗಿದೆ. 15 ರಿಂದ 29 ವರ್ಷ ವಯೋಮಿತಿಯೊಳಗಿನ ವಿದ್ಯಾರ್ಥಿ–ವಿದ್ಯಾರ್ಥಿನಿಯರು ಹಾಗೂ ಯುವಜನ ಸಂಘಗಳ ಸದಸ್ಯರು ಸ್ಪರ್ಧೆಗಳಲ್ಲಿ ಭಾಗವಹಿಸಬಹುದಾಗಿದೆ. ಆಸಕ್ತರು ತಮ್ಮ ಹೆಸರನ್ನು ನವೆಂಬರ್ 11ರೊಳಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕಚೇರಿಯಲ್ಲಿ ನೋಂದಾಯಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕಚೇರಿ ದೂರವಾಣಿ ಸಂಖ್ಯೆ 08352–251085 ಹಾಗೂ ಮೊಬೈಲ್ ಸಂಖ್ಯೆ 7019008443 ಹಾಗೂ 9535501872 ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ರಾಜಶೇಖರ ಧೈವಾಡಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹುಲಜಂತಿ ಶ್ರೀ ಮಾಳಿಂಗರಾಯ ಜಾತ್ರೆಗೆ ವಿಶೇಷ ಸಾರಿಗೆ ವ್ಯವಸ್ಥೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಮಹಾರಾಷ್ಟ್ರ ದ ಜತ್ ತಾಲೂಕಿನ ಹುಲಜಂತಿ ಗ್ರಾಮದಲ್ಲಿ ನವೆಂಬರ್ 6 ರಿಂದ 11ರವರೆಗೆ ಜರುಗುವ ಶ್ರೀ ಮಾಳಿಂಗರಾಯ ದೇವರ ಜಾತ್ರೆ ಅಂಗವಾಗಿ ಯಾತ್ರಾರ್ಥಿಗಳ ಅನುಕೂಲಕ್ಕಾಗಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಜಯಪುರ ವಿಭಾಗದಿಂದ ವಿಶೇಷ ಸಾರಿಗೆ ಕಾರ್ಯಾಚರಣೆ ಕೈಗೊಳ್ಳಲಾಗಿದೆ ಎಂದು ವಿಭಾಗೀಯ ನಿಯಂತ್ರಣಾಧಿಕಾರಿಗಳು ತಿಳಿಸಿದ್ದಾರೆ. ಸಾರ್ವಜನಿಕರಿಗೆ ಉತ್ತಮ ಸಾರಿಗೆ ಸೌಲಭ್ಯ ಕಲ್ಪಿಸುವ ದೃಷ್ಟಿಯಿಂದ ವಿಜಯಪುರ ವಿಭಾಗದ ವಿಜಯಪುರ, ಇಂಡಿ, ಚಡಚಣ,ಸಿಂದಗಿ, ಮುದ್ದೇಬಿಹಾಳ, ತಾಳಿಕೊಟೆ ಹಾಗೂ ಬಸವನಬಾಗೇವಾಡಿ ಬಸ್ ನಿಲ್ದಾಣದಿಂದ ಹೆಚ್ಚುವರಿ ವಿಶೇಷ ಬಸ್ ಕಾರ್ಯಾಚರಣೆ ಮಾಡಲಾಗುವುದು.


ಪ್ರಯಾಣಿಕರು ಸಾರಿಗೆ ಸೌಲಭ್ಯಕ್ಕಾಗಿ ಹಾಗೂ ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ಘಟಕ ವ್ಯವಸ್ಥಾಪಕರು ವಿಜಯಪುರ–1: ಮೊ: 7760992263, ವಿಜಯಪುರ–2 ಮೊ: 7760992264,ಇಂಡಿ ಮೊ: 7760992265, ಸಿಂದಗಿ ಮೊ: 7760992266, ಮುದ್ದೇಬಿಹಾಳ ಮೊ: 7760992267, ತಾಳಿಕೋಟ ಮೊ: 7760992268, ಬಸವನ ಬಾಗೇವಾಡಿ ಮೊ: 7760992269, ಕೇಂದ್ರ ಬಸ್ ನಿಲ್ದಾಣ ವಿಜಯಪುರ ದೂ: 08352–251344 ಹಾಗೂ ಮೊ: 7760992258 ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ ಎಂದು ವಿಭಾಗೀಯ ನಿಯಂತ್ರಣಾಧಿಕಾರಿಗಳಾದ ನಾರಾಯಣಪ್ಪ ಕುರುಬರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೌಶಲ್ಯ ತರಬೇತಿಗೆ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: 2026–27ನೇ ಸಾಲಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳಿಗೆ ಕೌಶಲ್ಯಾಭಿವೃದ್ಧಿ ತರಬೇತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ ಹಾಗೂ ಪಾರ್ಸಿ ಸಮುದಾಯದ ವಿದ್ಯಾರ್ಥಿಗಳಿಗೆ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಮೂಲಕ ತರಬೇತಿ ನೀಡಲಾಗುತ್ತಿದ್ದು,ಅರ್ಹ ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ನ.10ರೊಳಗಾಗಿ ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಅಭ್ಯರ್ಥಿಗಳು https://minority-skill-form.vercel.app/ ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಗರದ ಜಿಲ್ಲಾ ಅಲ್ಪಸಂಖ್ಯಾತರ ಕಚೇರಿ 08352–295523 ಅಥವಾ ವಿಜಯಪುರ ತಾಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ 8123710766, ಬಸವನಬಾಗೇವಾಡಿ 9972340721, ಮುದ್ದೇಬಿಹಾಳ 8722445552, ಇಂಡಿ 9900109759 ಹಾಗೂ ಸಿಂದಗಿ 9035558609 ತಾಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳನ್ನು ಸಂಪರ್ಕಿಸಬಹುದು. ಎಂದು ಅಲ್ಪಸಂಖ್ಯಾತರ ಕಲ್ಯಾಣ ಜಿಲ್ಲಾ ಅಧಿಕಾರಿಗಳ ಪ್ರಕಟಣೆ ತಿಳಿಸಿದೆ.



ವಿವಿ ಮಟ್ಟದ ಖೋ–ಖೋ ಪಂದ್ಯಾವಳಿಯಲ್ಲಿ ದ್ವಿತೀಯ ಸ್ಥಾನ

■ ಉದಯರಶ್ಮಿ ದಿನಪತ್ರಿಕೆ

ತಾಳಿಕೋಟೆ: ಪಟ್ಟಣದ ಶ್ರೀ ಎಸ್.ಎಸ್. ವಿದ್ಯಾ ಸಂಸ್ಥೆಯ ಅಡಿಯಲ್ಲಿ ನಡೆಯುತ್ತಿರುವ ಶ್ರೀ ಎಚ್.ಎಸ್. ಪಾಟೀಲ್ ದೈಹಿಕ ಶಿಕ್ಷಣ ಮಹಾವಿದ್ಯಾಲಯವು 2026–27ನೇ ಸಾಲಿನ ಕಿತ್ತೂರು ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದ ಖೋ–ಖೋ ಪಂದ್ಯಾವಳಿಯಲ್ಲಿ ದ್ವಿತೀಯ ಸ್ಥಾನ ಪಡೆಯುವ ಮೂಲಕ ಮಹಾವಿದ್ಯಾಲಯಕ್ಕೆ ಕೀರ್ತಿ ತಂದಿದೆ.

ಸವದತ್ತಿಯ ಶ್ರೀ ಎಸ್.ವಿ.ಎಸ್. ಬೆಳ್ಳುಬ್ಬಿ ಆರ್ಟ್ಸ್ ಕಾಮರ್ಸ್ ಕಾಲೇಜಿನಲ್ಲಿ ನಡೆದ ವಿಶ್ವವಿದ್ಯಾಲಯ ಮಟ್ಟದ ಖೋ–ಖೋ ಪಂದ್ಯಾವಳಿಯಲ್ಲಿ ಮಹಾವಿದ್ಯಾಲಯದ ವಿದ್ಯಾರ್ಥಿಗಳ ತಂಡವು ಅತ್ಯುತ್ತಮ ಕ್ರೀಡಾ ಪ್ರದರ್ಶನ ನೀಡಿ ದ್ವಿತೀಯ ಸ್ಥಾನ ಗಳಿಸಿದೆ.

ವಿದ್ಯಾರ್ಥಿಗಳ ಈ ಸಾಧನೆಗೆ ಶ್ರೀ ಎಸ್. ಎಸ್. ವಿದ್ಯಾ ಸಂಸ್ಥೆಯ ಅಧ್ಯಕ್ಷ ಎಚ್.ಎಸ್. ಪಾಟೀಲ್, ಕಾರ್ಯದರ್ಶಿ ಸಚಿನ್ ಎಚ್. ಪಾಟೀಲ್, ಆಡಳಿತಾಧಿಕಾರಿ ಕಿರಣ್ ಎಚ್. ಪಾಟೀಲ್, ಮಹಾವಿದ್ಯಾಲಯದ ಪ್ರಾಚಾರ್ಯರು, ಉಪನ್ಯಾಸಕರು ಹಾಗೂ ಸಿಬ್ಬಂದಿ ವರ್ಗದವರು ಹರ್ಷ ವ್ಯಕ್ತಪಡಿಸಿ ಅಭಿನಂದಿಸಿದ್ದಾರೆ. ವಿದ್ಯಾರ್ಥಿಗಳ ಕ್ರೀಡಾ ಸಾಧನೆ ಮಹಾವಿದ್ಯಾಲಯದ ಹೆಮ್ಮೆಯ ಸಂಗತಿಯಾಗಿದೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ.

ಸಾವಿರಾರು ಬಡ ವಿದ್ಯಾರ್ಥಿಗಳ ಬದುಕಿಗೆ ಅಕ್ಷರದ ಬೆಳಕು ನೀಡಿದ ಜ್ಞಾನದಾಸೋಹಿ । ಶೈಕ್ಷಣಿಕ ಸೇವೆಗೆ ರಾಜ್ಯೋತ್ಸವ ಪ್ರಶಸ್ತಿ

ಚವಡಿಹಾಳದ ಶಾಂತಪ್ಪ ದಶವಂತರಿಗೆ ಗೌರವ ಸನ್ಮಾನ

■ ಉದಯರಶ್ಮಿ ದಿನಪತ್ರಿಕೆ



ಚಡಚಣ: ಶೈಕ್ಷಣಿಕವಾಗಿ ಹಿಂದುಳಿದಿರುವ ಇಂಡಿ ತಾಲೂಕಿನ ಚವಡಿಹಾಳ ಗ್ರಾಮದ ಶಿಕ್ಷಣ ಕ್ಷೇತ್ರದಲ್ಲಿ ತಮ್ಮದೇ ಆದ ಛಾಪು ಮೂಡಿಸಿ, ಸಾವಿರಾರು ಬಡ ವಿದ್ಯಾರ್ಥಿಗಳಿಗೆ ಅಕ್ಷರದ ಬೆಳಕು ನೀಡುತ್ತಿರುವ ಜ್ಞಾನದಾಸೋಹಿ ಶಾಂತಪ್ಪ ಪಂಚಪ್ಪ ದಶವಂತರಿಗೆ 2026ನೇ ಸಾಲಿನ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಲಭಿಸಿರುವುದು ಈ ಭಾಗದ ಜನತೆಗೆ ಹೆಮ್ಮೆಯ ಸಂಗತಿಯಾಗಿದೆ. ಶೈಕ್ಷಣಿಕವಾಗಿ ಹಿಂದುಳಿದ ಪ್ರದೇಶಕ್ಕೆ ದೊರೆತ ಗೌರವದ ಕಳಶವಾಗಿದೆ ಎಂದು ಬ್ಲಾಕ್ ಕಾಂಗ್ರೆಸ್ ಯುವ ಘಟಕದ ಅಧ್ಯಕ್ಷ ಸತೀಶಗೌಡ ಹತ್ತಿ ಹೇಳಿದರು.

ಪ್ರಶಸ್ತಿ ಪುರಸ್ಕೃತ ಶಾಂತಪ್ಪ ದಶವಂತರನ್ನು ಸನ್ಮಾನಿಸಿ ಮಾತನಾಡಿದ ಅವರು, ಗ್ರಾಮೀಣ ಭಾಗದ ಬಡ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗಾಗಿ ಶ್ರಮಿಸುತ್ತಿರುವ ಅವರ ಸೇವೆ ಇಂದಿನ ಯುವಜನತೆಗೆ ಮಾದರಿಯಾಗಿದೆ. ಸಂಸ್ಥೆಯಲ್ಲಿ ಕಲಿಯುತ್ತಿರುವ ಪ್ರತಿಯೊಬ್ಬ ವಿದ್ಯಾರ್ಥಿಯೂ ಶಾಂತಪ್ಪ ದಶವಂತರ ಸಾಧನೆ ಮತ್ತು ಸೇವಾ ಮನೋಭಾವವನ್ನು ಆದರ್ಶವಾಗಿಟ್ಟುಕೊಂಡು, ಉತ್ತಮ ಶಿಕ್ಷಣ ಪಡೆದು ಭವಿಷ್ಯದಲ್ಲಿ ಇಂತಹ ಗೌರವಗಳಿಗೆ ಭಾಜನರಾಗಬೇಕು ಎಂದು ಕರೆ ನೀಡಿದರು.

ಎನ್‌ಎಸ್‌ಯುಐ ತಾಲೂಕು ಘಟಕದ ಅಧ್ಯಕ್ಷ ಸುನೀಲ ಅತನೂರ ಮಾತನಾಡಿ, ಈ ಭಾಗದ ಅನೇಕ ಯುವಜನರಿಗೆ ಶಾಂತಪ್ಪ ದಶವಂತರು ಪ್ರೇರಣೆಯಾಗಿದ್ದಾರೆ. ಎಲ್ಲರನ್ನೂ ಕುಟುಂಬದ ಸದಸ್ಯರಂತೆ ಕಾಣುವ ಅವರ ಗುಣ ವಿಶೇಷವಾಗಿದೆ. ವಿದ್ಯಾರ್ಥಿಗಳು ಮತ್ತು ಪಾಲಕರನ್ನು ಅನ್ನದಾತರಂತೆ ಗೌರವಿಸುವ ಅವರ ವಿಶಾಲ ಮನೋಭಾವವೇ ಅವರನ್ನು ಈ ಎತ್ತರಕ್ಕೆ ಬೆಳೆಸಿದೆ. ಶಿಕ್ಷಣ ಕ್ಷೇತ್ರಕ್ಕೆ ಅವರು ಸಲ್ಲಿಸಿರುವ ಸೇವೆ ಸದಾ ಸ್ಮರಣೀಯ ಎಂದು ಅಭಿಪ್ರಾಯಪಟ್ಟರು.

ಸನ್ಮಾನ ಕಾರ್ಯಕ್ರಮದಲ್ಲಿ ಯುವ ಮುಖಂಡ ವಿನೋದ ಶಹಾಪುರ, ಎನ್‌ಎಸ್‌ಯುಐ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗಂಗಾಧರ ಗುಳೇದ, ಜಟ್ಟೆಪ್ಪ ಹುಲ್ಲೂರ, ಸಂತೋಷ ರವಳಿ, ಸಚಿನ ಹೊಸಮನಿ, ಅಕ್ಬರ ಖಾನೆ, ಈಶ್ವರ ಸಜ್ಜನ, ಆನಂದ ಆಲಮೇಲೆ, ಸಂಸ್ಥೆಯ ಕಾರ್ಯದರ್ಶಿ ಶಿವಾನಂದ ದಶವಂತ, ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಬಿಜಾಪುರ ಜಿಲ್ಲಾ ಅಂಗವಿಕಲರ ಕ್ಷೇಮಾಭಿವೃದ್ಧಿ ಸಂಸ್ಥೆಯ ಖಜಾಂಚಿ ವಿನೋದ ಖೇಡ ಸರಕಾರಕ್ಕೆ ಆಗ್ರಹ

ಶಿಕ್ಷಣ–ಉದ್ಯೋಗದಲ್ಲಿ ಅನ್ಯಾಯ ತಡೆಗಟ್ಟಲು 371(ಜೆ) ಮೀಸಲಾತಿ ಒದಗಿಸಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ:ಜಿಲ್ಲೆಯನ್ನು371(ಜೆ)ಮೀಸಲಾತಿಯಿಂದ ಕೈಬಿಟ್ಟಿದ್ದಕ್ಕೆ ವಿದ್ಯಾರ್ಥಿಗಳಿಗೆ ಶಿಕ್ಷಣ, ಯುವಜನರಿಗೆ ಉದ್ಯೋಗದಲ್ಲಿ ದೊಡ್ಡ ಅನ್ಯಾಯವಾಗುತ್ತಿದೆ ಕೂಡಲೇ ರಾಜ್ಯ ಸರಕಾರ ಜಿಲ್ಲೆಗೆ ಮೀಸಲಾತಿ ಒದಗಿಸಲು ಕೇಂದ್ರಕ್ಕೆ ಪ್ರಸ್ತಾವನೆ ಕಳಿಸಿಕೊಟ್ಟು ಜಿಲ್ಲೆಯ ಜನರಿಗೆ ನ್ಯಾಯ ಒದಗಿಸಬೇಕೆಂದು ಬಿಜಾಪುರ ಜಿಲ್ಲಾ ಅಂಗವಿಕಲರ ಕ್ಷೇಮಾಭಿವೃದ್ಧಿ ಸಂಸ್ಥೆಯ ಖಜಾಂಚಿ ವಿನೋದ ಖೇಡ ಸರಕಾರಕ್ಕೆ ಆಗ್ರಹಿಸಿದರು. ಅವರು ಇಂಡಿ ತಾಲೂಕಿನ ಮಿರಗಿ ಗ್ರಾಮದಲ್ಲಿ ವಿಜಯಪುರ ಜಿಲ್ಲೆಗೆ 371(ಜೆ) ಮೀಸಲಾತಿ ಹೋರಾಟ ಕುರಿತು ವಿಜಯಪುರ ಜಿಲ್ಲಾ 371(ಜೆ) ಹೋರಾಟ ಸಮಿತಿಯಿಂದ ಹಮ್ಮಿಕೊಂಡಿದ್ದ ಪತ್ರ ಚಳುವಳಿಯಲ್ಲಿ ಮಾತನಾಡಿದರು.

ಜಿಲ್ಲೆಯ ಮಕ್ಕಳಿಗೆ ಶಿಕ್ಷಣ ಮತ್ತು ಯುವಜನರಿಗೆ ಉದ್ಯೋಗಾವಕಾಶಕ್ಕಾಗಿ 371(ಜೆ) ಮೀಸಲಾತಿ ಅತ್ಯಂತ ಅವಶ್ಯಕವಾಗಿದೆ, ವಿಜಯಪುರ ಜಿಲ್ಲಾ 371(ಜೆ) ಹೋರಾಟ ಸಮಿತಿಯ ಹೋರಾಟಕ್ಕೆ ಜಿಲ್ಲೆಯ ಪ್ರತಿಗ್ರಾಮದ ಜನ ಬೆಂಬಲಿಸಬೇಕೆಂದು ಮನವಿ ಮಾಡಿದ ಅವರು ಇಂಡಿ ತಾಲೂಕಿನ ಖೇಡಗಿಯ ಸ್ವಾಮಿ ರಾಮಾನಂದ ತೀರ್ಥರು ಹೈದ್ರಾಬಾದ್ ವಿಮೋಚನಾ ಚಳುವಳಿಯ ನೇತೃತ್ವ ವಹಿಸಿದ್ದರಿಂದ ಆ ಪ್ರಾಂತ ಭಾರತ ಒಕ್ಕೂಟದ ಭಾಗವಾಗಿದೆ ಎಂಬುದು ಸರಕಾರ ಮರೆಯಬಾರದು ಅತ್ಯಂತ ಹಿಂದುಳಿದ ಮತ್ತು ವಿಮೋಚನಾ ಚಳುವಳಿ ನೇತೃತ್ವ ವಹಿಸಿದ ವಿಜಯಪುರ ಜಿಲ್ಲೆಗೆ ಕೂಡಲೇ ಮೀಸಲಾತಿ ಒದಗಿಸಬೇಕು ಎಂದು ಒತ್ತಾಯಿಸಿದರು. ಪತ್ರ ಚಳುವಳಿಯಲ್ಲಿ 180 ಜನ ವಿದ್ಯಾರ್ಥಿಗಳು ಮುಖ್ಯಮಂತ್ರಿಗಳಿಗೆ 371ಜೆ ಮೀಸಲಾತಿಗೆ ಒತ್ತಾಯಿಸಿ ಪತ್ರ ಬರೆದು ಹೋರಾಟಕ್ಕೆ ಬೆಂಬಲಿಸಿದರು.

ಈ ಸಂದರ್ಭದಲ್ಲಿ ಗ್ರಾಮದ ಪ್ರಮುಖರಾದ ದತ್ತಾತ್ರೇಯ ಕುಲಕರ್ಣಿ, ಎಂ ಎಂ ಮಾಣಿ,ವೈ ಜಿ ಬಿರಾದಾರ, ಸಿದ್ರಾಮ ಹಳ್ಳೂರ ಮಾತನಾಡಿದರು.ಈ ಸಂದರ್ಭದಲ್ಲಿ ನಂದಾ ನಾಯಿಕ, ಹಣಮಂತರಾಯ ದೇವರಮನಿ, ಶೀಲು ಕಲ್ಲೋಳ್ಳಿ, ಸುನೀಲ ಅಥನೂರ, ಉದಯಕುಮಾರ ಪೂಜಾರಿ, ದೇವಯ್ಯ ಹಿರೇಮಠ, ಕಾಶೀನಾಥ ಸಾಳುಂಕೆ, ಶಾಂತಾಬಾಯಿ ಬ್ಯಾಳಿ, ರಾಜು ನಡಕಟ್ಟಿ, ಆಕಾಶ ಬಿದರಕೋಟಿ, ರಾಜು ಉದಂಡೆ ಸೇರಿದಂತೆ ಶಾಲಾ ಮಕ್ಕಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಕನ್ನಡ ಭಾಷೆ ಜೀವನದ ಕನ್ನಡಿಯಾಗಬೇಕು :ಪ್ರೊ.ಕುಂಟೋಜಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಕನ್ನಡ ಭಾಷೆಗೆ ಎರಡುವರೆ ಸಾವಿರ ವರ್ಷಗಳ ಶ್ರೀಮಂತ ಇತಿಹಾಸವಿದೆ. ಕರ್ನಾಟಕದ ಇತಿಹಾಸ, ಸಂಸ್ಕೃತಿ ಮತ್ತು ಪರಂಪರೆಯ ಪ್ರತಿಬಿಂಬವೇ ಮಧುರ ಕನ್ನಡ ಭಾಷೆಯಾಗಿದೆ ಎಂದು ಪ್ರೊ. ಯು.ಎನ್. ಕುಂಟೋಜಿ ಹೇಳಿದರು.

ನಗರದ ವೀರಶೈವ ಲಿಂಗಾಯತ ಸಭಾ ಭವನದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾ ಘಟಕ ಹಮ್ಮಿಕೊಂಡಿದ್ದ 87ನೇಯ ಶಿವಾನುಭವ ಗೋಷ್ಠಿಯಲ್ಲಿ ಕನ್ನಡ ನಾಡು, ನುಡಿ ಕುರಿತು ಅವರು ಮಾತನಾಡಿದರು.

ಕನ್ನಡ ಭಾಷೆ ನಮ್ಮೆಲ್ಲರ ಬದುಕಿಗೆ ಪ್ರೇರಕವಾಗಿದೆ. ಅದು ನಮ್ಮ ಬುದ್ಧಿಶಕ್ತಿ, ವಿವೇಕ ವಿಸ್ತರಿಸಿ ನಮ್ಮ ಚಿಂತನೆಗಳಿಗೆ ಆಕಾರ ನೀಡುತ್ತದೆ. ಕನ್ನಡ ನಾಡು ನಮಗೆ ಬದುಕು, ನೆಮ್ಮದಿ ಸಿರಿಸಂಪತ್ತಿನ ಜೊತೆಗೆ ಗೌರವ ಕೊಟ್ಟಿದೆ. ಹೀಗಾಗಿ ಕನ್ನಡ ತಾಯಿಯ ಸೇವೆ ನಮ್ಮ ಮೊದಲ ಆದ್ಯತೆ. ನಾಡಿನ ಸಾಂಸ್ಕೃತಿ, ಪರಂಪರೆಯ ಸೊಗಡು ಅಡಗಿದೆ. ಕನ್ನಡ ಅಂದರೆ ಖುಷಿ. ನವೆಂಬರ್ 1, ನಂಬರ 1 ಆಗಬೇಕು. ಕನ್ನಡ ಜೀವನದ ಕನ್ನಡಿಯಾಗಬೇಕು. ಅದು ನಾಲಿಗೆ ಭಾಷೆಯಾಗದೆ ಹೃದಯದ ಭಾಷೆಯಾಗಬೇಕು. ಕನ್ನಡ ಬೆಳವಣಿಗೆಗೆ ಉಳಿಸುವ ಜವಾಬ್ದಾರಿ ನಮ್ಮದಾಗಬೇಕು. ಅದೊಂದು ಭಾವೈಕ್ಯತೆಯ ತಾಣ. ಕನ್ನಡ ಶ್ರೀಮಂತ ಭಾಷೆ ಎಂದು ಹೇಳಿದರು.

ಮಹಾಸಭೆಯ ನಿರ್ದೇಶಕ ಡಾ. ಸಂಗಮೇಶ ಮೇತ್ರಿ ಮಾತನಾಡಿ, ಕನ್ನಡಿಗರಾದ ನಾವು ನಮ್ಮ ನಾಡಿನ ಜಲ, ಭಾಷೆ, ಸಾಂಸ್ಕೃತಿಗಳ ಉಳಿವಿಗಾಗಿ ಶ್ರಮಿಸಬೇಕಾಗಿದೆ. ಕನ್ನಡ ಸಂಸ್ಕೃತಿ ಉಳಿಸಿ ಬೆಳೆಸಬೇಕಾಗಿದೆ ಎಂದರು.

ಮಹಾಸಭೆಯ ಜಿಲ್ಲಾಧ್ಯಕ್ಷ ವಿ.ಸಿ. ನಾಗಠಾಣ ಮಾತನಾಡಿ, 71ನೇಯ ಕನ್ನಡ ರಾಜ್ಯೋತ್ಸವ ಹಬ್ಬವಿದ್ದಂತೆ, ಹುಯಿಲಗೋಳ ನಾರಾಯಣರು ರಚಿಸಿದ ಉದಯವಾಗಲಿ ನಮ್ಮ ಚಲವು ಕನ್ನಡ ನಾಡು ನಮಗೆಲ್ಲ ಮಾದರಿ. ಕನ್ನಡ ಭಾಷೆ ಅಭಿಮಾನ ಬೇಕು. ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.

ಜ್ಯೋತಿ ಬಾಗಲಕೋಟ, ಸೋಮಶೇಖರ ಕುರ್ಲೆ,ಅಶ್ವಿನಿ ಅಣೆಪ್ಪನವರ ಕನ್ನಡ ಗೀತೆ ಪ್ರಸ್ತುತಪಡಿಸಿದರು. ನಂತರ ತಾಯಿ ಭುವನೇಶ್ವರಿ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಲಾಯಿತು. ಪ್ರಧಾನ ಕಾರ್ಯದರ್ಶಿ ಬಿ.ಟಿ. ಈಶ್ವರಗೊಂಡ ಸ್ವಾಗತಿಸಿದರು. ಸಾಹಿತಿ ಸಂಗಮೇಶ ಬದಾಮಿ ನಿರೂಪಿಸಿದರು. ಮಹಾಸಭೆಯ ಉಪಾಧ್ಯಕ್ಷ ಸಹದೇವ ನಾಡಗೌಡ ವಂದಿಸಿದರು.

ಕಾರ್ಯಕ್ರಮದಲ್ಲಿ ಎಸ್.ಎನ್. ಶಿವಣಗಿ, ಜಗದೀಶ ಮೋಟಗಿ, ಓಂಕಾರ ಅಥರ್ಗಾ, ಮೋದಿ ದಂಪತಿ, ಮಲ್ಲಿಕಾರ್ಜುನ ಅಮರೆಣ್ಣವರ, ಎಮ್.ವಾಯ್. ಜಾವಡಗಿ, ಸುಭಾಸ ಬೆಟಗೇರಿ, ವಿಠ್ಠಲ ತೇಲಿ, ಕಾಶಿನಾಥ ಅಣೆಪ್ಪನವರ, ಶರಣರು ಶರಣೇಯರು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಸದೃಢ ಆರೋಗ್ಯಕ್ಕೆ ಕ್ರೀಡೆ ಪೂರಕ :ಕೆ.ಎ.ಉಪ್ಪಾರ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಮಾನವ ಇಂದು ಸಮಾಜದಲ್ಲಿ ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿದ್ದಾನೆ. ಏನನ್ನೋ ಸಾಧಿಸಬೇಕೆನ್ನುವ ಹವ್ಯಾಸದಲ್ಲಿ ತನ್ನನ್ನು ತಾನು ಕಳೆದುಕೊಂಡು ಹಲವಾರು ರೋಗಗಳಿಂದ ಬಳಲುತ್ತಿರುವುದು ಕಾಣುತ್ತಿದ್ದೇವೆ ಎಂದು ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ವಿಜಯಪುರ ಹಾಗೂ ಸಿಕ್ಯಾಬ ಮಹಿಳಾ ಪದವಿ ಪೂರ್ವ ಕಾಲೇಜು ವಿಜಯಪುರ ಇವರ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡ ಜಿಲ್ಲಾಮಟ್ಟದ ಕ್ರೀಡಾಕೂಟ 2026–27ನೇ ಸಾಲಿನ ಕರಾಟೆ, ಈಜು, ಜಿಮ್ನಾಸ್ಟಿಕ್, ಯೋಗ, ಟೈಕೊಂಡೊ, ಬಾಸ್ಕೆಟ್‌ಬಾಲ್ ಕ್ರೀಡೆಗಳನ್ನು ಶಾಲಾ ಶಿಕ್ಷಣ ಇಲಾಖೆಯ (ಪದವಿ ಪೂರ್ವ) ಉಪನಿರ್ದೇಶಕ ಕೆ.ಎ. ಉಪ್ಪಾರ ರವರು ಉದ್ಘಾಟಿಸಿ ಮಾತನಾಡಿದರು.

ದೈಹಿಕ ಕಸರತ್ತು ಇಲ್ಲದಿರುವುದು ರೋಗಗಳಿಗೆ ಕಾರಣ. ಯಾಂತ್ರಿಕ ಬದುಕಿನಲ್ಲಿ ಏನೆಲ್ಲಾ ಸೌಲಭ್ಯಗಳಿದ್ದರು ಹತ್ತು ಹಲವಾರು ರೋಗಗಳು ನಮ್ಮನ್ನು ಆವರಿಸಿವೆ. ಇದರಿಂದ ಸಕ್ಕರೆ ಕಾಯಿಲೆ, ರಕ್ತದೊತ್ತಡ ಇನ್ನೂ ಹಲವಾರು ರೋಗಗಳಿಂದ ಸಮಾಜ ಮುಕ್ತವಾಗಬೇಕಾದರೆ ಕ್ರೀಡೆ ಬಹುಮುಖ್ಯ. ಮಹಿಳೆಯು ತನ್ನನ್ನು ತಾನು ರಕ್ಷಣೆ ಹೊಂದಲು ಕರಾಟೆಯಂತಹ ಕ್ರೀಡೆ ಬಹುಮುಖ್ಯ ಪಾತ್ರ ವಹಿಸುತ್ತದೆ ಎಂದು ಅಭಿಪ್ರಾಯಪಟ್ಟರು.

ಇನ್ನೊರ್ವ ಅತಿಥಿ ಸರಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಧ್ಯಾಪಕ ಬಿ.ಎಸ್. ಗೌರಿ ಇವರು ಮಾತನಾಡುತ್ತಾ, ಯಾವ ಸಂಪತ್ತು ಇದ್ದರೇನು ಆರೋಗ್ಯ ಸಂಪತ್ತೇ ನಿಜವಾದ ಸಂಪತ್ತು. ವ್ಯಾಯಾಮ ಯೋಗ ಇನ್ನಿತರ ಕ್ರೀಡೆಗಳಲ್ಲಿ ಭಾಗವಹಿಸುವುದು ಬಹುಮುಖ್ಯ. ಅದರಿಂದ ಸದೃಢ ದೇಹ ಹೊಂದಲು ಸಾಧ್ಯ ಎಂದು ಅಭಿಪ್ರಾಯಪಟ್ಟರು.

ಉಪನ್ಯಾಸಕ ಯು.ಎನ್. ಕುಂಟೋಜಿ ಇವರು ಪ್ರಾಸ್ತಾವಿಕವಾಗಿ ಮಾತನಾಡುತ್ತಾ, ಕ್ರೀಡೆ ಬದುಕಿಗೆ ಜೀವನೋತ್ಸಾಹ ತುಂಬುತ್ತದೆ. ದಿನನಿತ್ಯದ ಸಂತೋಷ, ಉಲ್ಲಾಸಕ್ಕೆ ಕ್ರೀಡೆ ಪೂರಕವಾಗಿದೆ. ಮುಖದಲ್ಲಿ ಕಳೆಯೊಂದಿಗೆ ದೇಹಕ್ಕೆ ಚೈತನ್ಯದಾಯಕವಾಗಿರಲು ಕ್ರೀಡೆ ಸಹಾಯಕವಾಗುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಕಾಲೇಜಿನ ಪ್ರಾಚಾರ್ಯ ಎಮ್.ಎಮ್. ಗುರಡಿ ಮಾತನಾಡಿದರು.

ವೇದಿಕೆಯಲ್ಲಿ ದೈಹಿಕ ಉಪನ್ಯಾಸಕರ ಸಂಘದ ಅಧ್ಯಕ್ಷ ಎಸ್.ಆರ್. ಮುತ್ತಗಿ, ಕ್ರೀಡಾ ಸಂಯೋಜಕರಾದ ಬಿ.ಎಲ್. ನಾಟಿಕಾರ, ಎಸ್.ವಿ. ರಜಪೂತ, ಕಾಂತು ಒಡೆಯರ ಆಸೀನರಾಗಿದ್ದರು.

ಕಾರ್ಯಕ್ರಮದಲ್ಲಿ ಉಪನ್ಯಾಸಕರುಗಳಾದ ಕರಾಟೆ ಅಧ್ಯಕ್ಷ ಎ.ಎಸ್. ಪಟೇಲ, ಮುತ್ತು ಡೋಣಿ, ಪ್ರವೀಣ ವಠಾರ, ಜಗದೀಶ ರೆಡ್ಡಿ, ರಿಯಾಜಅಹ್ಮದ ಬಗಲೂರ, ವಿಜಯ ರಾಠೋಡ, ಎಮ್.ಎಸ್. ಕೆರೂರ, ಶಂಕರ ಸಣ್ಣಪ್ಪ, ರಿಯಾಜಅಹ್ಮದ ಎಮ್.ಜೆ., ಎ. ಎಮ್. ಹೆಬಳಿಕರ, ಮಂಜುಳಾ ಗಟೆಗಾರ ಇನ್ನಿತರ ಪ್ರಾಧ್ಯಾಪಕರು ಉಪಸ್ಥಿತರಿದ್ದರು.

ಸಾದಿಯಾ ಮುರಾಳ ನಿರೂಪಿಸಿದರು. ನಾಜಿಮಾ ಪಠಾಣ ವಂದಿಸಿದರು.

Printed by: AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR